ವಿಜಯಪುರ । ಸಂಪುಟ 04 । ಸಂಚಿಕೆ 248 । ಪುಟ 04 । ₹ 3.00

https://udayarashminews.com

udayarashmi 90088 88340

ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com

RNI NO: KARKAN/2023/86203

ಶುಕ್ರವಾರ, ನವೆಂಬರ್ 27, 2026



"ಬರ ಪರಿಸ್ಥಿತಿಯಿಂದ ರೈತರು ಸಂಕಷ್ಟದಲ್ಲಿರುವುದರಿಂದ ಸಕ್ಕರೆ ಕಾರ್ಖಾನೆಗಳು ಹಣ ಪಾವತಿಗೆ ಮುಂಚಿತವಾಗಿಯೇ ಯೋಜನೆ ರೂಪಿಸಿಕೊಳ್ಳಬೇಕು. ಕಬ್ಬು ಪೂರೈಸಿದ ರೈತರಿಗೆ ನಿಗದಿತ ಅವಧಿಯಲ್ಲಿ ಹಣ ಪಾವತಿಸಿ, ಯಾವುದೇ ಬಾಕಿ ಉಳಿಸಿಕೊಳ್ಳಬಾರದು. ಈ ವರ್ಷ ಪಾವತಿ ವಿಳಂಬವಾಗದಂತೆ ವಿಶೇಷ ಗಮನಹರಿಸಬೇಕು."

■ ಡಾ.ಆನಂದ್ ಕೆ.
ಜಿಲ್ಲಾಧಿಕಾರಿ, ವಿಜಯಪುರ

ಸಂವಿಧಾನವು ಸಮಾನತೆ ಮತ್ತು ಭ್ರಾತೃತ್ವದ ಸಂಕೇತ

ವಿಜಯಪುರದಲ್ಲಿ ಜಿಲ್ಲಾಡಳಿತ, ಜಿಪಂಹಾಗೂ ಸಮಾಜ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಆಯೋಜಿಸಿದ್ದ ಸಂವಿಧಾನ ದಿನಾಚರಣೆ ಕಾರ್ಯಕ್ರಮ । ಶಾಸಕ ವಿಠಲ ಕಟಕಧೋಂಡ ಅಭಿಮತ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಭಾರತೀಯ ಸಂವಿಧಾನವು ದೇಶಪ್ರೇಮ, ಲಿಂಗಭೇದವಿಲ್ಲದ ಸಮಾನತೆ, ಸ್ವಾತಂತ್ರ್ಯ ಹಾಗೂ ಭ್ರಾತೃತ್ವದ ಮೌಲ್ಯಗಳನ್ನು ಒಳಗೊಂಡಿರುವ ವಿಶಿಷ್ಟ ದಾಖಲೆಯಾಗಿದ್ದು, ವಿಶ್ವದ ಅತಿದೊಡ್ಡ ಪ್ರಜಾಪ್ರಭುತ್ವ ವ್ಯವಸ್ಥೆಯ ಭದ್ರ ತಳಹದಿಯಾಗಿದೆ. ಸಂವಿಧಾನದ ಮೂಲಕ ಪ್ರತಿಯೊಬ್ಬ ನಾಗರಿಕರಿಗೂ ಸಮಾನ ಹಕ್ಕು ಮತ್ತು ಗೌರವಯುತ ಬದುಕಿನ ಅವಕಾಶ ಕಲ್ಪಿಸಿದ ಡಾ.ಬಿ.ಆರ್. ಅಂಬೇಡ್ಕರ್ ಅವರ ಕೊಡುಗೆ ಅನನ್ಯವಾಗಿದೆ ಎಂದು ಶಾಸಕ ವಿಠಲ ಕಟಕಧೋಂಡ ಹೇಳಿದರು.

ನಗರದ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ಗುರುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸಹಯೋಗದಲ್ಲಿ ಆಯೋಜಿಸಿದ್ದ ಸಂವಿಧಾನ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಡಾ. ಬಿ.ಆರ್.ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಅವರು ಮಾತನಾಡಿದರು.

ಡಾ.ಬಿ.ಆರ್. ಅಂಬೇಡ್ಕರ್ ಅವರ ನೇತೃತ್ವದಲ್ಲಿ ರೂಪುಗೊಂಡ ಭಾರತೀಯ ಸಂವಿಧಾನವು ಜಾತಿ, ಧರ್ಮ, ವರ್ಗ, ಬಡವ–ಬಲ್ಲಿದ ಎಂಬ ಯಾವುದೇ ಭೇದವಿಲ್ಲದೆ ಪ್ರತಿಯೊಬ್ಬ ಪ್ರಜೆಗೂ ಸಮಾನ ಹಕ್ಕು ಮತ್ತು ಅವಕಾಶಗಳನ್ನು ಒದಗಿಸಿದೆ. ಸಂವಿಧಾನವು ಕೇವಲ ಕಾನೂನುಗಳ ದಾಖಲೆಯಾಗಿರದೆ, ಸಮಾನತೆ, ಸ್ವಾತಂತ್ರ್ಯ, ನ್ಯಾಯ ಮತ್ತು ಭ್ರಾತೃತ್ವದ ಮೌಲ್ಯಗಳ ಆಧಾರದಲ್ಲಿ ದೇಶವನ್ನು ಮುನ್ನಡೆಸುವ ಮಾರ್ಗದರ್ಶಿಯಾಗಿದೆ. ಸಂವಿಧಾನದ ಆಶಯಗಳನ್ನು ಅರಿತು, ಅವುಗಳನ್ನು ನಮ್ಮ ನಡೆ–ನುಡಿಗಳಲ್ಲಿ ಅಳವಡಿಸಿಕೊಳ್ಳುವ ಮೂಲಕ ಸಮಾನತೆ ಮತ್ತು ಸೌಹಾರ್ದತೆಯ ಸಮಾಜ ನಿರ್ಮಾಣಕ್ಕೆ ಪ್ರತಿಯೊಬ್ಬರೂ ಕೈಜೋಡಿಸಬೇಕು. ಡಾ.ಬಿ.ಆರ್. ಅಂಬೇಡ್ಕರ್ ಅವರ ಕೊಡುಗೆ ಎಂದೆಂದಿಗೂ ಅಜರಾಮರ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಪಾಲಿಕೆ ಮೇಯರ್ ಮಡಿವಾಳಪ್ಪ ಕರಡಿ,ವಿಜಯಪುರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಗಂಗಾಧರ ಸಂಬಣ್ಣಿ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಆನಂದ ಪ್ರಕಾಶ ಮೀನಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ, ವಿಜಯಪುರ ಉಪವಿಭಾಗಾಧಿಕಾರಿ ಜುಫಿಶಾನ್ ಹಕ್, ಮಹಾನಗರ ಪಾಲಿಕೆ ಆಯುಕ್ತ ವಿಜಯ ಮೆಕ್ಕಳಕಿ, ಜಿಲ್ಲಾ ಶಸ್ತ್ರಚಿಕಿತ್ಸಕ ಶಿವಾನಂದ ಮಾಸ್ತಿಹೋಳಿ, ಉಪ ಅರಣ್ಯ ಸಂರಕ್ಷಣಾಧಿಕಾರಿ ಮಲ್ಲಿನಾಥ ಕುಸುನಾಳ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಹೇಶ ಪೋತದಾರ,ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಂತೋಷ ಭೂವಿ, ಜೆ.ಎಸ್. ಪಾಟೀಲ, ಪೀರಪ್ಪ ನಡುವಿನಮನಿ, ಸಿದ್ದು ರಾಯಣ್ಣವರ, ಭೀಮರಾಯ ಜಿಗಜಿಣಗಿ, ಸೋಮು ಕಲ್ಲೂರ, ರಮೇಶ ಅಸಂಗಿ, ಅಹ್ಮದ್ ಪಟೇಲ್ ಭಾಗವಾನ, ರವೀಂದ್ರ ಬಂಥನಾಳ, ರವೀಂದ್ರ ಜಾಧವ, ದಿಲೀಪ ಪ್ರಭಾಕರ, ನಡಗೇರಿ, ಶರಣು ಸಿಂಧೆ, ಅಶೋಕ ಚಲವಾದಿ, ವಿನಾಯಕ ಗುಣಸಾಗರ, ವಿದ್ಯಾವತಿ ಅಂಕಲಗಿ, ರಾವುತ ತಳಕೇರಿ, ಅವಿನಾಶ ಬಾಣಿಕೋಲ, ಮಳಸಿದ್ದ ನಾಯ್ಕೋಡಿ, ಬಂಡಿವಡ್ಡರ, ಶ್ರೀನಿವಾಸ ಶಹಾಪುರ, ಕೆ.ವಿ. ಕೋರೆ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ವಸತಿ ಶಾಲೆಗಳ ಪ್ರಾಂಶುಪಾಲರು, ಸಿಬ್ಬಂದಿ, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ಶಿವಾನಂದ ಬಡಿಗೇರ ನಿರೂಪಿಸಿದರು.

ಕಾರ್ಯಕ್ರಮಕ್ಕೂ ಮೊದಲು ನಗರದ ಡಾ. ಬಿ.ಆರ್. ಅಂಬೇಡ್ಕರ್ ಅವರ ಪ್ರತಿಮೆಗೆ ನಾಗಠಾಣ ಕ್ಷೇತ್ರದ ಶಾಸಕರಾದ ವಿಠ್ಠಲ ಕಟಕದೊಂಡ ಅವರು ಮಹನಿಯರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು.



ಬಸವಣ್ಣನವರ ವಚನಗಳು ಸಮಾನತೆ ಮತ್ತು ಮಾನವೀಯ ಮೌಲ್ಯಗಳ ಪ್ರತೀಕ :ದರ್ಗಾ



ಭಾರತದ ಸಂವಿಧಾನದ ಮೂಲ ಆಶಯವೇ ಎಲ್ಲರನ್ನು ಒಳಗೊಳ್ಳುವ ಸಂಸ್ಕೃತಿಯಾಗಿದೆ. ಸಮಾಜದ ಪ್ರತಿಯೊಬ್ಬರಿಗೂ ಸಮಾನ ಅವಕಾಶ, ಗೌರವ ಮತ್ತು ನ್ಯಾಯ ದೊರೆಯಬೇಕು ಎಂಬ ಉದಾತ್ತ ಪರಿಕಲ್ಪನೆಯನ್ನು ಸಂವಿಧಾನ ಹೊಂದಿದೆ. ನಮ್ಮ ಜೀವನದ ಪ್ರತಿಯೊಂದು ಉಸಿರಿನಲ್ಲಿಯೂ ಸಂವಿಧಾನದ ಆಶಯಗಳು ಅಡಕವಾಗಿವೆ. ಸಂವಿಧಾನವು ಕೇವಲ ಆಡಳಿತಾತ್ಮಕ ದಾಖಲೆಯಲ್ಲ, ಅದು ಇಡೀ ಬದುಕಿನ ಮಾರ್ಗದರ್ಶಿ ಹಾಗೂ ಪ್ರಜಾಪ್ರಭುತ್ವದ ಸೌಂದರ್ಯವಾಗಿದೆ ಎಂದು ಹಿರಿಯ ಸಾಹಿತಿ ರಂಜಾನ್ ದರ್ಗಾ ಹೇಳಿದರು.

ಕಾರ್ಯಕ್ರಮದಲ್ಲಿ ಅವರು ವಿಶೇಷ ಉಪನ್ಯಾಸ ನೀಡುತ್ತ, ಬಸವಣ್ಣನವರ ವಚನಗಳು ಸಮಾನತೆ ಮತ್ತು ಮಾನವೀಯ ಮೌಲ್ಯಗಳ ಪ್ರತೀಕವಾಗಿವೆ. ಬಡವರು, ಮಹಿಳೆಯರು ಸೇರಿದಂತೆ ಸಮಾಜದ ಎಲ್ಲ ವರ್ಗದ ಜನರಿಗೂ ಸಮಾನತೆ ದೊರೆಯಬೇಕು ಎಂಬ ಕನಸನ್ನು ಬಸವಾದಿ ಶರಣರು ಕಂಡಿದ್ದರು. ಅವರ ವಿಚಾರಧಾರೆಗಳು ಇಂದಿಗೂ ಸಮಾಜಕ್ಕೆ ದಾರಿದೀಪವಾಗಿವೆ. ಸಮಾಜದ ಪ್ರತಿಯೊಬ್ಬರೂ ಯಾವುದೇ ತಾರತಮ್ಯವಿಲ್ಲದೆ ಸಮಾನ ಅವಕಾಶ ಮತ್ತು ಗೌರವದಿಂದ ಬದುಕುವ ವಾತಾವರಣವನ್ನು ಸಂವಿಧಾನ ಕಲ್ಪಿಸಿದೆ. ಪ್ರಜಾಪ್ರಭುತ್ವದ ಮೌಲ್ಯಗಳನ್ನು ಸಾಕಾರಗೊಳಿಸುವ ಶಕ್ತಿ ಸಂವಿಧಾನಕ್ಕಿದ್ದು, ಪ್ರತಿಯೊಬ್ಬರೂ ಅದರ ಮಹತ್ವವನ್ನು ಅರಿತು ಸಂವಿಧಾನದ ಆಶಯಗಳಿಗೆ ಅನುಗುಣವಾಗಿ ನಡೆದುಕೊಳ್ಳುವುದು ಅಗತ್ಯ ಎಂದು ರಂಜಾನ ದರ್ಗಾ ತಿಳಿಸಿದರು.

ಸಂವಿಧಾನವು ನಮ್ಮ ದೇಶದ ಸರ್ವೋಚ್ಚ ಕಾನೂನು



ಕಾರ್ಯಕ್ರಮದಲ್ಲಿ ವಿಜಯಪುರ ಜಿಲ್ಲಾಧಿಕಾರಿ ಡಾ. ಆನಂದ ಕೆ. ಅವರು ಮಾತನಾಡಿ, ಸಂವಿಧಾನವು ಕೇವಲ ಒಂದು ಪುಸ್ತಕ ಅಥವಾ ನಿಯಮಾವಳಿಯಲ್ಲ, ಅದೊಂದು ಜೀವಂತ ದಾಖಲೆಯಾಗಿದ್ದು, ದೇಶದ ಸರ್ವೋಚ್ಚ ಕಾನೂನಾಗಿದೆ. ದೇಶದ ಆಡಳಿತ ವ್ಯವಸ್ಥೆ, ಕಾನೂನು ರಚನೆ ಹಾಗೂ ಪ್ರಜಾಪ್ರಭುತ್ವದ ಕಾರ್ಯನಿರ್ವಹಣೆಗೆ ಸಂವಿಧಾನವೇ ಮೂಲ ಆಧಾರವಾಗಿದೆ. ಯಾವುದೇ ಹೊಸ ಕಾನೂನು ರಚಿಸುವಾಗಲೂ ಸಂವಿಧಾನದ ಆಶಯ, ತತ್ವಗಳು ಮತ್ತು ಮೌಲ್ಯಗಳ ತಳಹದಿಯಾಗಿದೆ ಎಂದು ಹೇಳಿದರು.

ಸಂವಿಧಾನವು ಪ್ರತಿಯೊಬ್ಬ ನಾಗರಿಕನಿಗೂ ಹಲವು ಮೂಲಭೂತ ಹಕ್ಕುಗಳನ್ನು ಒದಗಿಸಿದೆ. ಹಕ್ಕುಗಳ ಜೊತೆಗೆ ನಾಗರಿಕರು ತಮ್ಮ ಕರ್ತವ್ಯ ಮತ್ತು ಜವಾಬ್ದಾರಿಗಳನ್ನು ಅರಿತು ಪಾಲಿಸಬೇಕು. ಹಕ್ಕು ಮತ್ತು ಕರ್ತವ್ಯಗಳು ಒಂದಕ್ಕೊಂದು ಪೂರಕವಾಗಿದ್ದು, ಇವೆರಡರ ಸಮರ್ಪಕ ಪಾಲನೆಯಿಂದ ಪ್ರಜಾಪ್ರಭುತ್ವ ವ್ಯವಸ್ಥೆ ಮತ್ತಷ್ಟು ಬಲಗೊಳ್ಳುತ್ತದೆ ಎಂದು ಹೇಳಿದರು.

ನ.30ರಂದು ಆಯ–ವ್ಯಯ ಬಜೆಟ್ ಪೂರ್ವಭಾವಿ ಸಭೆ

ಉದಯರಶ್ಮಿ ದಿನಪತ್ರಿಕೆ

ವಿಜಯಪುರ: 2027–28ನೇ ಸಾಲಿನ ಮಹಾನಗರ ಪಾಲಿಕೆಯ ಆಯ–ವ್ಯಯ (ಬಜೆಟ್) ಅಂದಾಜು ಪತ್ರಿಕೆ ಸಿದ್ಧಪಡಿಸುವ ಹಿನ್ನೆಲೆಯಲ್ಲಿ ಸಾರ್ವಜನಿಕರಿಂದ ಸಲಹೆ,ಸೂಚನೆಗಳನ್ನು ಪಡೆಯಲು ನವೆಂಬರ್ 30ರಂದು ಪ್ರಥಮ ಸುತ್ತಿನ ಬಜೆಟ್ ಪೂರ್ವಭಾವಿ ಸಾರ್ವಜನಿಕ ಸಭೆ ಮಹಾನಗರ ಪಾಲಿಕೆಯ ಮುಖ್ಯ ಕಚೇರಿಯಲ್ಲಿ ಬೆಳಿಗ್ಗೆ 11 ಗಂಟೆಗೆ ಆಯೋಜಿಸಲಾಗಿದೆ.

ಸಭೆಯಲ್ಲಿ ಸಾರ್ವಜನಿಕರು, ಕಲ್ಯಾಣ ಸಂಸ್ಥೆಗಳ ಪದಾಧಿಕಾರಿಗಳು, ವ್ಯಾಪಾರ ಮತ್ತು ಕೈಗಾರಿಕಾ ಸಂಸ್ಥೆಗಳ ಒಕ್ಕೂಟಗಳ ಸದಸ್ಯರು, ವಿವಿಧ ಸಂಘ–ಸಂಸ್ಥೆಗಳ ಮುಖ್ಯಸ್ಥರು ಹಾಗೂ ಗಣ್ಯ–ಮಾನ್ಯರು ಭಾಗವಹಿಸಿ, ಮಹಾನಗರ ಪಾಲಿಕೆಯ 2027–28ನೇ ಸಾಲಿನ ಆಯ–ವ್ಯಯದಲ್ಲಿ ಅಳವಡಿಸಿಕೊಳ್ಳಬೇಕಾದ ಅಭಿವೃದ್ಧಿ ಕಾರ್ಯಗಳು ಹಾಗೂ ಸಾರ್ವಜನಿಕರಿಗೆ ಅನುಕೂಲವಾಗುವ ಯೋಜನೆಗಳ ಕುರಿತು ಅಗತ್ಯ ಸಲಹೆ–ಸೂಚನೆಗಳನ್ನು ನೀಡುವಂತೆ ಮಹಾನಗರ ಪಾಲಿಕೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

ವಿಜಯಪುರ ಪರಂಪರೆ ಸಂರಕ್ಷಣೆ ಎಲ್ಲರ ಹೊಣೆ :ಡಾ.ಮಹೇಶ



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ವಿಜಯಪುರದ ಕಲೆ, ಸಂಸ್ಕೃತಿ ಹಾಗೂ ಪರಂಪರೆಯನ್ನು ಸಂರಕ್ಷಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ. ಈ ನಿಟ್ಟಿನಲ್ಲಿ ಆಯೋಜಿಸಿರುವ ಪಾರಂಪರಿಕ ನಡಿಗೆ ವಿಶೇಷ ಮಹತ್ವ ಹೊಂದಿದೆ ಎಂದು ಕನ್ನಡ ವಿಭಾಗದ ಹಿರಿಯ ಪ್ರಾಧ್ಯಾಪಕ ಡಾ. ಮಹೇಶ ಚಿಂತಾಮಣಿ ಹೇಳಿದರು.

ನಗರದ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಇತಿಹಾಸ ವಿಭಾಗ ಹಾಗೂ ಪ್ರವಾಸೋದ್ಯಮ ಇಲಾಖೆ, ಪುರಾತತ್ವ, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ಸಹಯೋಗದಲ್ಲಿ ನ.24ರಂದು ಬೆಳಿಗ್ಗೆ 11 ಗಂಟೆಗೆ ವಿಶ್ವವಿದ್ಯಾನಿಲಯದ ಆವರಣದಿಂದ ಸಂಗೀತ ಮಹಲ್‌ವರೆಗೆ ಹಮ್ಮಿಕೊಂಡಿದ್ದ ವಿಶ್ವ ಪರಂಪರಾ ಸಪ್ತಾಹದ ಅಂಗವಾಗಿ ಪಾರಂಪರಿಕ ನಡಿಗೆ (ಜಾಥಾ) ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕ ಅರವಿಂದ ಹೂಗಾರ ಮಾತನಾಡಿ, ಐತಿಹಾಸಿಕ ಸ್ಮಾರಕಗಳನ್ನು ಸಂರಕ್ಷಿಸುವ ಹಾಗೂ ಅವುಗಳ ಮಹತ್ವವನ್ನು ಕಾಪಾಡುವ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಅಗತ್ಯವಿದೆ ಎಂದರು.

ಸಾಮಾಜಿಕ ಹೋರಾಟಗಾರ ಪೀಟರ್ ಅಲೆಕ್ಸಾಂಡರ್ ಮಾತನಾಡಿ, ವಿಜಯಪುರ ನಗರವು ವಿಶ್ವ ಪರಂಪರೆಯ ಪಟ್ಟಿಗೆ ಸೇರುವ ಎಲ್ಲ ಅರ್ಹತೆಗಳನ್ನು ಹೊಂದಿದೆ. ಈ ನಿಟ್ಟಿನಲ್ಲಿ ಎಲ್ಲರೂ ಒಗ್ಗಟ್ಟಿನಿಂದ ಶ್ರಮಿಸಬೇಕು ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಸಂಪನ್ಮೂಲ ವ್ಯಕ್ತಿ ಅಮೀನ ಹುಲ್ಲೂರ ಮಾತನಾಡಿ, ವಿಜಯಪುರ ನಗರವು ಕೋಮುಸಾಮರಸ್ಯಕ್ಕೆ ಹೆಸರಾಗಿದೆ. ಎರಡನೇ ಇಬ್ರಾಹಿಂ ಆದಿಲ್‌ಶಾಹಿ ಕಲೆ, ವಾಸ್ತುಶಿಲ್ಪ ಹಾಗೂ ಸಂಗೀತ ಕ್ಷೇತ್ರಗಳಿಗೆ ಅಪಾರ ಕೊಡುಗೆ ನೀಡಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಪ್ರವಾಸೋದ್ಯಮ ಇಲಾಖೆಯ ಸಮಾಲೋಚಕ ಅನೀಲ, ಉಪನ್ಯಾಸಕರಾದ ಗುರುರಾಜ ಬಮ್ಮನಹಳ್ಳಿ, ಡಾ. ಎಂ.ಎಸ್. ಮುಜಾವರ, ಡಾ. ಚಂದ್ರಕಲಾ ಹಳ್ಳಿ, ಅಶೋಕ ಈ. ಮಲಾಬಾದಿ ಸೇರಿದಂತೆ ನೂರಾರು ವಿದ್ಯಾರ್ಥಿನಿಯರು ಭಾಗವಹಿಸಿದ್ದರು.

ವಿಶ್ವ ಪರಂಪರಾ ಸಪ್ತಾಹದ ಅಂಗವಾಗಿ ವಿಜಯಪುರದ ಕಲೆ ಮತ್ತು ಪರಂಪರೆಯ ಕುರಿತು ರಸಪ್ರಶ್ನೆ, ಪ್ರಬಂಧ ಹಾಗೂ ಚಿತ್ರಕಲಾ ಸ್ಪರ್ಧೆಗಳನ್ನೂ ಆಯೋಜಿಸಲಾಗಿತ್ತು.

ರವಿ ಹಂಜ್ ಮೇಲೆ ಕಾನೂನು ಕ್ರಮಕ್ಕೆ ಆಗ್ರಹಿಸಿ ಪ್ರತಿಭಟನೆ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ನಗರದಲ್ಲಿ ಬಸವ ಮಂಟಪ ಪುಸ್ತಕದ ಕರ್ತೃ ರವಿ ಹಂಜ್ ಹಾಗೂ ಕೃತಿಯ ಪ್ರಕಾಶಕರ ಮೇಲೆ ಕಾನೂನು ಕ್ರಮಕ್ಕೆ ಆಗ್ರಹಿಸಿ ಗುರುವಾರ ಬಸವಾಭಿಮಾನಿಗಳು ಬೃಹತ್ ಪ್ರತಿಭಟನಾ ರ್ಯಾಲಿ ನಡೆಸಿದರು.

ಬೃಹತ್ ಸಂಖ್ಯೆಯ ಜನಸಮೂಹದ ಮೆರವಣಿಗೆಯ ನೇತೃತ್ವವನ್ನು ಅಲಮೇಲದ ಮಲ್ಲಿ ಬೊಮ್ಮಯ್ಯ ವಿರಕ್ತ ಮಠದ ಮಲ್ಲಿ ಬೊಮ್ಮಯ್ಯ ಶ್ರೀಗಳು, ಹಿಕ್ಕನುಗುತ್ತಿ ಲಿಂಗಾಯತ ಮಹಾಮಠದ ಶ್ರೀ ಪ್ರಭುಲಿಂಗ ಶ್ರೀಗಳು ಹಾಗೂ ಸಿಂದಗಿಯ ಗುರುದೇವ ಆಶ್ರಮದ ಶಾಂತಗಂಗಾಧರ ಶ್ರೀಗಳು ಮೆರವಣಿಗೆಯ ನೇತೃತ್ವ ವಹಿಸಿದ್ದರು.

ತಹಶೀಲ್ದಾರ್ ಕಾರ್ಯಾಲಯದ ಮುಂದೆ ನಡೆದ ಪ್ರತಿಭಟನಾ ಸಭೆಯಲ್ಲಿ ಮಾತನಾಡಿದ ಬಸವಾಭಿಮಾನಿ ಜಗದೀಶ್ ಕಲಬುರ್ಗಿ ಅವರು, ರವಿ ಹಂಜ್ ಭಾರತದ ಅನಿವಾಸಿ ವ್ಯಕ್ತಿಯಾಗಿದ್ದು ವಿಶ್ವಗುರು ಬಸವಣ್ಣನವರ ಕುರಿತು ಇಲ್ಲಸಲ್ಲದ್ದನ್ನು ಬರೆದು ಅವಮಾನವೆಸಗಿದ್ದಾನೆ. ವಿಶ್ವಗುರುವಿಗೆ ಆದಂತ ಅವಮಾನ ಇದು ಮಾನವೀಯ ಮೌಲ್ಯವುಳ್ಳ ಎಲ್ಲ ಜನರ ಅವಮಾನವಾಗಿದೆ. ಇವನ ಈ ಕುಕೃತ್ಯದಿಂದ ಬಸವಾಭಿಮಾನಿಗಳಿಗೆ ಮತ್ತು ಲಿಂಗಾಯತ ಸಮೂಹಕ್ಕೆ ಅಪಾರ ನೋವುಂಟು ಮಾಡಿದ ಈತನಿಗೆ ಕಠಿಣ ಶಿಕ್ಷೆ ಕೊಡಬೇಕು ಎಂದು ಆಗ್ರಹಿಸಿದರು.

ಮಲ್ಲಿ ಬೊಮ್ಮಯ್ಯ ಶ್ರೀಗಳು, ಶಾಂತಗಂಗಾಧರ ಶ್ರೀಗಳು, ಬಸವದಳದ ಶಿವಾನಂದ ಕಲಬುರ್ಗಿ, ಬಸವ ಸಮಿತಿಯ ನಾನಾಗೌಡ ಪಾಟೀಲ, ದಲಿತ ಸೈನ್ಯದ ಬೆಳಗಾವಿ ವಿಭಾಗೀಯ ಅಧ್ಯಕ್ಷ ಮಹೇಶ್ ಜಾಬಾನೂರ ಮಾತನಾಡಿ, ರವಿ ಹಂಜ ಮತ್ತು ಪ್ರಕಾಶಕರ ಬಸವ ವಿರೋಧಿ ನಿಲುವನ್ನು ಖಂಡಿಸಿದರಲ್ಲದೆ, ಅವರ ಮೇಲೆ ಸರ್ಕಾರ ಕಠಿಣ ಕಾನೂನು ಕ್ರಮ ಜರುಗಿಸಬೇಕೆಂದು ಒತ್ತಾಯಿಸಿದರು.

ಮಲಕಣ್ಣ ತಳವಾರ, ಸಂಗಣ್ಣ ಬ್ಯಾಕೋಡ, ರಾಷ್ಟ್ರೀಯ ಬಸವ ದಳದ ಅಧ್ಯಕ್ಷ ಮಲ್ಲಿಕಾರ್ಜುನ ಅರ್ಜುನಗಿ, ಶೈಲಜಾ ಸ್ಥಾವರ ಮಠ, ಪಂಚಮಸಾಲಿ ಸಮಾಜದ ತಾಲೂಕು ಅಧ್ಯಕ್ಷ ಮಲ್ಲಿಕಾರ್ಜುನ ಹಂಗರಗಿ, ದಾನಪ್ಪ ಜೋಗೂರ, ರಾಘವೇಂದ್ರ ಹೂಗಾರ, ರೈತ ಸಂಘದ ಅಧ್ಯಕ್ಷರು ಹಾಗೂ ಕಾರ್ಯಕರ್ತರು, ಕೆ ಆರ್ ಎಸ್ ಪಕ್ಷದ ಕಾರ್ಯಕರ್ತರು ಸೇರಿದಂತೆ ಅಪಾರ ಸಂಖ್ಯೆಯ ಬಸವಾಭಿಮಾನಿಗಳು ಭಾಗವಹಿಸಿದ್ದರು.

ಪ್ರತಿಭಟನಾಕಾರರು ಲೇಖಕ ರವಿ ಹಂಜ್ ಹಾಗೂ ಪ್ರಕಾಶಕರಿಗೆ ದಿಕ್ಕಾರ ಕೂಗುತ್ತಾ, ಅವರ ಭಾವಚಿತ್ರಗಳನ್ನು ಮತ್ತು ಬಸವ ಮಂಟಪ ಕೃತಿಗಳನ್ನು ದಹಿಸಿ ಆಕ್ರೋಶ ವ್ಯಕ್ತಪಡಿಸಿದರು.

ಸ್ವಾಮಿ ರಾಮಾನಂದ ತೀರ್ಥರ ಜಯಂತಿ ಆಚರಣೆಗೆ ಆಗ್ರಹ

ವಿಜಯಪುರದಲ್ಲಿ ಸಂಘ -ಸಂಸ್ಥೆಗಳ ಒಕ್ಕೂಟದ ಮುಖಂಡ ವಿನೋದ ಖೇಡ ಒತ್ತಾಯಿಸಿ ಸರಕಾರಕ್ಕೆ ಮನವಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ವಿಜಯಪುರ ಜಿಲ್ಲಾ ಸಂಘ –ಸಂಸ್ಥೆಗಳ ಒಕ್ಕೂಟದ ಮುಖಂಡರು ಹೈದ್ರಾಬಾದ್ ವಿಮೋಚನಾ ಚಳುವಳಿ ಪಿತಾಮಹ ರಾಷ್ಟ್ರವೀರ ಸ್ವಾಮಿ ರಾಮಾನಂದ ತೀರ್ಥರ ಜನ್ಮದಿನವಾದ ಜುಲೈ 26ರಂದು ರಾಜ್ಯಾದ್ಯಂತ ಎಲ್ಲ ಶಾಲಾ ಕಾಲೇಜು ಹಾಗೂ ಸರಕಾರಿ ಕಚೇರಿಗಳಲ್ಲಿ ಸರಕಾರದಿಂದ ಜಯಂತಿ ಆಚರಣೆ ಮಾಡಲು ಆಗ್ರಹಿಸಿ ವಿಜಯಪುರ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿ ಡಿ ಕೆ ಶಿವಕುಮಾರ,ಅವರಿಗೆ ಮನವಿ ಸಲ್ಲಿಸಿ ಆಗ್ರಹಿಸಿದರ

ದಾಸ ಸಾಹಿತ್ಯದ ಧ್ರುವತಾರೆ ಭಕ್ತ ಕನಕದಾಸರು

ಇಂದು (ನವ್ಹೆಂಬರ 27, ಶುಕ್ರವಾರ) ಭಕ್ತ ಕನಕದಾಸರ ಜಯಂತಿ. ಜಯಂತಿ ಎಂದರೆ ಕೇವಲ ಒಬ್ಬ ಮಹಾನ್ ಸಂತನನ್ನು ಸ್ಮರಿಸುವ ದಿನವಲ್ಲ; ಅವರ ಆದರ್ಶಗಳು, ವಿಚಾರಧಾರೆಗಳು ಮತ್ತು ಸಮಾನತೆಯ ಸಂದೇಶಗಳನ್ನು ನಮ್ಮ ಬದುಕಿನಲ್ಲಿ ಅಳವಡಿಸಿಕೊಳ್ಳುವ ಪವಿತ್ರ ಸಂದರ್ಭವಾಗಿದೆ. ಅವರ ವಿಚಾರಗಳು ಯುವಜನತೆಯ ಹೃದಯದಲ್ಲಿ ನೆಲೆಸಬೇಕು.

■ ಉದಯರಶ್ಮಿ ದಿನಪತ್ರಿಕೆ







ಕನ್ನಡ ನಾಡಿನ ಭಕ್ತಿ ಪರಂಪರೆಯಲ್ಲಿ, ದಾಸ ಸಾಹಿತ್ಯದ ಲೋಕದಲ್ಲಿ ಹಾಗೂ ಸಮಾಜ ಸುಧಾರಣೆಯ ಇತಿಹಾಸದಲ್ಲಿ ಅಚ್ಚಳಿಯದ ಹೆಜ್ಜೆಗುರುತು ಮೂಡಿಸಿದ ಮಹಾನ್ ಸಂತ, ತತ್ವಜ್ಞಾನಿ, ಕವಿ ಹಾಗೂ ಸಮಾಜ ಚಿಂತಕರೇ ಶ್ರೀ ಕನಕದಾಸರು.

ಕನಕದಾಸರ ಜಯಂತಿ ಎಂದರೆ ಕೇವಲ ಒಬ್ಬ ಮಹಾನ್ ಸಂತನನ್ನು ಸ್ಮರಿಸುವ ದಿನವಲ್ಲ; ಅವರ ಆದರ್ಶಗಳು, ವಿಚಾರಧಾರೆಗಳು ಮತ್ತು ಸಮಾನತೆಯ ಸಂದೇಶಗಳನ್ನು ನಮ್ಮ ಬದುಕಿನಲ್ಲಿ ಅಳವಡಿಸಿಕೊಳ್ಳುವ ಪವಿತ್ರ ಸಂದರ್ಭವಾಗಿದೆ.

ಸರಳ ಬದುಕು – ಉನ್ನತ ವಿಚಾರ

ಸುಮಾರು 16ನೇ ಶತಮಾನದಲ್ಲಿ ಬದುಕಿದ ಕನಕದಾಸರು ಮೂಲತಃ ಬಾಡ ಗ್ರಾಮದವರು. ಅವರ ಮೂಲ ಹೆಸರು ತಿಮ್ಮಪ್ಪ ನಾಯಕ ಎಂದು ಹೇಳಲಾಗುತ್ತದೆ. ಲೌಕಿಕ ಜೀವನದ ಅನುಭವಗಳ ನಂತರ ಭಕ್ತಿಮಾರ್ಗದತ್ತ ಮುಖಮಾಡಿದ ಅವರು, ಶ್ರೀ ವ್ಯಾಸರಾಯರ



ಶಿಷ್ಯರಾಗಿ ಹರಿಭಕ್ತಿಯ ಮಾರ್ಗದಲ್ಲಿ ಸಾಗಿದರು.

ಸಂಪತ್ತು, ಅಧಿಕಾರ, ಜಾತಿ, ಅಂತಸ್ತುಗಳಿಗಿಂತ ಭಕ್ತಿ, ಮಾನವೀಯತೆ ಮತ್ತು ಸತ್ಯವೇ ಶ್ರೇಷ್ಠ ಎಂಬುದನ್ನು ತಮ್ಮ ಬದುಕು ಮತ್ತು ಸಾಹಿತ್ಯದ ಮೂಲಕ ಸಾರಿದರು.

ದಾಸ ಸಾಹಿತ್ಯಕ್ಕೆ ಅಮೂಲ್ಯ ಕೊಡುಗೆ

ಕನಕದಾಸರು ತಮ್ಮ ಕೀರ್ತನೆಗಳ ಮೂಲಕ ಜನಸಾಮಾನ್ಯರ ಮನಸ್ಸಿಗೆ ತಲುಪಿದ ಮಹಾನ್ ಸಾಹಿತ್ಯ ರತ್ನ. ಅವರ ರಚನೆಗಳಲ್ಲಿ ಭಕ್ತಿ, ಜ್ಞಾನ, ವೈರಾಗ್ಯ, ನೀತಿ, ಸಾಮಾಜಿಕ ಕಳಕಳಿ ಹಾಗೂ ಮಾನವೀಯ ಮೌಲ್ಯಗಳು ಸುಂದರವಾಗಿ ಅನಾವರಣಗೊಂಡಿವೆ.

ಅವರ ಪ್ರಮುಖ ಕೃತಿಗಳು
ಮೋಹನತರಂಗಿಣಿ
ನಳಚರಿತ್ರೆ
ಹರಿಭಕ್ತಿಸಾರ
ರಾಮಧಾನ್ಯ ಚರಿತ್ರೆ

ವಿಶೇಷವಾಗಿ ರಾಮಧಾನ್ಯ ಚರಿತ್ರೆ ಯಲ್ಲಿ ರಾಗಿ ಮತ್ತು ಭತ್ತದ ರೂಪಕದ ಮೂಲಕ ಸಮಾಜದಲ್ಲಿನ ಮೇಲು–ಕೀಳು ಭಾವನೆಗಳನ್ನು ಪ್ರಶ್ನಿಸಿ, ಶ್ರಮಜೀವಿಗಳ ಬದುಕಿನ ಮಹತ್ವವನ್ನು ಸಾರಿದ್ದಾರೆ.

ಅವರ ಪ್ರತಿಯೊಂದು ಕೀರ್ತನೆಯೂ ಕೇವಲ ಸಂಗೀತವಲ್ಲ; ಅದು ಜೀವನದ ಪಾಠ, ಸಮಾಜಕ್ಕೆ ನೀಡಿದ ಸಂದೇಶ ಮತ್ತು ಆತ್ಮಾವಲೋಕನಕ್ಕೆ ಪ್ರೇರಣೆ.

ಇಂದಿನ ಸಮಾಜಕ್ಕೆ ಕನಕದಾಸರ ಸಂದೇಶವೇನು?

ಇಂದು ವಿಜ್ಞಾನ, ತಂತ್ರಜ್ಞಾನ ಮತ್ತು ಶಿಕ್ಷಣ ಕ್ಷೇತ್ರಗಳಲ್ಲಿ ನಾವು ಸಾಕಷ್ಟು ಪ್ರಗತಿ ಸಾಧಿಸಿದ್ದೇವೆ. ಆದರೆ ಜಾತಿ–ಧರ್ಮದ ಹೆಸರಿನಲ್ಲಿ ಭೇದಭಾವ, ಅಸಮಾನತೆ, ಅಹಂಕಾರ ಮತ್ತು ಮೌಢ್ಯಗಳು ಇನ್ನೂ ಸಮಾಜದಲ್ಲಿ ಕಂಡುಬರುತ್ತಿವೆ.

ಇಂತಹ ಸಂದರ್ಭದಲ್ಲಿ ಕನಕದಾಸರ ವಿಚಾರಧಾರೆಗಳು ಹೆಚ್ಚು ಪ್ರಸ್ತುತವಾಗುತ್ತವೆ.



ಜಾತಿಗಿಂತ ಗುಣಕ್ಕೆ ಬೆಲೆ ನೀಡೋಣ.

ಧರ್ಮಕ್ಕಿಂತ ಮಾನವೀಯತೆಗೆ ಆದ್ಯತೆ ನೀಡೋಣ.

ಅಹಂಕಾರಕ್ಕಿಂತ ವಿನಯವನ್ನು ಬೆಳೆಸೋಣ.

ಮೂಢನಂಬಿಕೆಗಿಂತ ಜ್ಞಾನಕ್ಕೆ ಮಹತ್ವ ನೀಡೋಣ.

ಬಡವ–ಬಲ್ಲಿದರೆಂಬ ಭೇದವಿಲ್ಲದೆ ಎಲ್ಲರನ್ನೂ ಗೌರವಿಸೋಣ. ಶಿಕ್ಷಣ ಮತ್ತು ಸಾಹಿತ್ಯದ ಮೂಲಕ ಸಮಾನತೆಯ ಸಮಾಜ ನಿರ್ಮಿಸೋಣ.

ವಿಶೇಷವಾಗಿ ವಿದ್ಯಾರ್ಥಿಗಳು ಕನಕದಾಸರ ಜೀವನ ಚರಿತ್ರೆ ಮತ್ತು ಸಾಹಿತ್ಯವನ್ನು ಅಧ್ಯಯನ ಮಾಡುವುದರಿಂದ ಸತ್ಯ, ಪ್ರಾಮಾಣಿಕತೆ, ಸಹಬಾಳ್ವೆ, ಸಮಾನತೆ ಹಾಗೂ ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಳ್ಳಬಹುದು.

ಕನಕದಾಸರ ಜಯಂತಿ ಕೇವಲ ಆಚರಣೆಯಲ್ಲ, ಆದರ್ಶಗಳ ಅನುಷ್ಠಾನವಾಗಲಿ!

ಕನಕದಾಸರು ಒಂದು ಸಮುದಾಯಕ್ಕೆ ಸೀಮಿತವಾದ ಸಂತನಲ್ಲ; ಅವರು ಇಡೀ ಮಾನವಕುಲಕ್ಕೆ ಸೇರಿದ ಮಹಾನ್ ದಾರ್ಶನಿಕರು. ಅವರ ಸಾಹಿತ್ಯಕ್ಕೆ ಭಾಷೆಯ ಗಡಿ ಇಲ್ಲ, ಅವರ ಭಕ್ತಿಗೆ ಜಾತಿಯ ಹಂಗಿಲ್ಲ, ಅವರ ಚಿಂತನೆಗೆ ಕಾಲದ ಮಿತಿಯಿಲ್ಲ.

ಅವರು ಬಿಟ್ಟುಹೋದ ಸಾಹಿತ್ಯ ಸಂಪತ್ತು ನಮ್ಮ ನಾಡಿನ ಸಾಂಸ್ಕೃತಿಕ ಪರಂಪರೆಯ ಅಮೂಲ್ಯ ಆಸ್ತಿ. ಅವರ ಕೀರ್ತನೆಗಳು ಮನೆ–ಮನಗಳಲ್ಲಿ ಮೊಳಗಬೇಕು, ಅವರ ವಿಚಾರಗಳು ಯುವಜನತೆಯ ಹೃದಯದಲ್ಲಿ ನೆಲೆಸಬೇಕು ಮತ್ತು ಅವರ ಸಮಾನತೆಯ ಸಂದೇಶ ಸಮಾಜದ ಪ್ರತಿಯೊಬ್ಬರ ಬದುಕಿನಲ್ಲಿ ಸಾಕಾರಗೊಳ್ಳಬೇಕು.

ಕನಕದಾಸರ ಜಯಂತಿಯ ಈ ಶುಭ ಸಂದರ್ಭದಲ್ಲಿ ಅವರ ಜೀವನದ ಆದರ್ಶಗಳನ್ನು ನಮ್ಮ ಬದುಕಿನಲ್ಲಿ ಅಳವಡಿಸಿಕೊಂಡು, ಜಾತಿ–ಮತಗಳ ಗೋಡೆಗಳನ್ನು ಮೀರಿ ಪ್ರೀತಿ, ವಿಶ್ವಾಸ, ಸಹೋದರತ್ವ ಮತ್ತು ಮಾನವೀಯತೆಯಿಂದ ಕೂಡಿದ ಸುಂದರ ಸಮಾಜವನ್ನು ನಿರ್ಮಿಸುವ ಸಂಕಲ್ಪ ಮಾಡೋಣ.

ಲೇಖನ
– ಲಕ್ಷ್ಮೀಪುತ್ರ ಕಿರನಳ್ಳಿ.
ಅಧ್ಯಕ್ಷರು, ಮಕ್ಕಳ ಸಾಹಿತ್ಯ ಸಂಗಮ
ಆಲಮೇಲ – ವಿಜಯಪುರ ಜಿಲ್ಲೆ



ಬೂದು ತಲೆಯ ಸ್ವಾಂಪ್‌ಹೆನ್

■ ಉದಯರಶ್ಮಿ ದಿನಪತ್ರಿಕೆ

ಜೀವ ವೈವಿಧ್ಯ

ಪಕ್ಷಿಗಳು ನಿಸರ್ಗದ ಬೆಲೆಬಾಳುವ ಆಸ್ತಿ ಎನ್ನಬಹುದು. ಪಕ್ಷಿಗಳ ಪ್ರಪಂಚವೇ ಅತ್ಯಂತ ಸುಂದರ ಮತ್ತು ವಿಸ್ಮಯ. ಅಂಕಿಅಂಶಗಳ ಪ್ರಕಾರ ಪ್ರಪಂಚದಲ್ಲಿ ಹತ್ತು ಸಾವಿರಕ್ಕೂ ಮಿಗಿಲಾದ ಜಾತಿಯ ಪಕ್ಷಿಗಳಿವೆ. ಪ್ರತಿಯೊಂದು ಹಕ್ಕಿಗೂ ತನ್ನದೇ ಆದ ವಿಶೇಷ ಆಕಾರ, ಬಣ್ಣ, ಮತ್ತು ಜೀವನ ಶೈಲಿಯಿದೆ. ನಮ್ಮ ಸುತ್ತಲಿರುವ ಹೆಚ್ಚಿನ ಪಕ್ಷಿಗಳು ತಮ್ಮ ರೆಕ್ಕೆಗಳ ಸಹಾಯದಿಂದ ಆಕಾಶದಲ್ಲಿ ಹಾರಬಲ್ಲವು. ಪಕ್ಷಿಗಳು ತಮ್ಮ ಮೊಟ್ಟೆಗಳನ್ನಿಟ್ಟು ಮರಿಗಳನ್ನು ರಕ್ಷಿಸಲು ಅಂದದ ಗೂಡುಗಳನ್ನು ನಿರ್ಮಿಸುತ್ತವೆ. ಅದೇ ರೀತಿ ಕೆಲ ಪಕ್ಷಿಗಳು ಹಣ್ಣು–ಕಾಳುಗಳನ್ನು ತಿಂದರೆ, ಹದ್ದು ಮತ್ತು ಗಿಡುಗ ಇತ್ಯಾದಿ ಪಕ್ಷಿಗಳು



ಮಾಂಸಾಹಾರಿಗಳು. ಇಂತಹ ವೈವಿಧ್ಯಮಯ ಪಕ್ಷಿಗಳ ಪೈಕಿ ಬೂದು ತಲೆಯ 'ಸ್ವಾಂಪ್‌ಹೆನ್' ಪಕ್ಷಿಯ ನೋಟ ಮತ್ತು ಜೀವನ ಶೈಲಿಯ ಕಾರಣಕ್ಕೆ ವಿಭಿನ್ನವಾಗಿ ಗುರುತಿಸಿಕೊಂಡಿದೆ.

ಬೂದು ತಲೆಯ ಸ್ವಾಂಪ್‌ಹೆನ್ (ವೈಜ್ಞಾನಿಕ ಹೆಸರು 'ಪೋರ್ಫಿರಿಯೊ ಪೋಲಿಯೊಸೆಫಾಲಸ್') ಮಧ್ಯಪ್ರಾಚ್ಯ ಮತ್ತು ಭಾರತೀಯ ಉಪಖಂಡ, ದಕ್ಷಿಣ ಚೀನಾ & ಉತ್ತರ ಥೈಲ್ಯಾಂಡಲ್ಲಿ ಕಂಡುಬರುವ ಸ್ವಾಂಪ್‌ಹೆನ್‌ನ ಒಂದು ಪ್ರಬೇಧ. ಪ್ರಾರಂಭದಲ್ಲಿ ಇದನ್ನು ನೇರಳೆ ಸ್ವಾಂಪ್‌ಹೆನ್‌ನ ಉಪಜಾತಿ ಎಂದು ಪರಿಗಣಿಸಿದ್ದರೂ,



2015ರಲ್ಲಿ ಪೂರ್ಣ ಜಾತಿಯೆಂದು ಗುರುತಿಸಲಾಯಿತು. ಇದು ಜೌಗು ಪ್ರದೇಶ ಹಕ್ಕಿಯಾಗಿದ್ದು, 43 ಸೆಂ.ಮೀ ಉದ್ದವಿರುತ್ತದೆ. ಇದು ಮಸುಕಾದ ಬೂದು ತಲೆ ಮತ್ತು ದಪ್ಪ ಕೆಂಪು ಕೊಕ್ಕನ್ನು ಹೊಂದಿರುತ್ತದೆ. ರೆಕ್ಕೆಗಳು ಹಸಿರು ಬಣ್ಣದ್ದಾಗಿದ್ದು, ಕಾಲುಗಳು ಕೆಂಪು ಬಣ್ಣದಿಂದ ಕೂಡಿರುತ್ತದೆ. ಇವುಗಳು ಜೌಗು ಪ್ರದೇಶಗಳು ಮತ್ತು ಸದಾ ತೇವಾಂಶದಿಂದ ಕೂಡಿರುವ ಕೊಳಗಳಲ್ಲಿ ಕಂಡುಬರುತ್ತದೆ. ಗಂಡು ಹಕ್ಕಿಗಳು ತನ್ನ ಕೊಕ್ಕಿನಲ್ಲಿ ನೀರಿನ ಕಳೆಗಳನ್ನು ಹಿಡಿದು ಹೆಣ್ಣು ಹಕ್ಕಿಯೆಡೆಗೆ ಜೋರಾಗಿ ನಗುತ್ತಾ ನಮಸ್ಕರಿಸುತ್ತಾ, ಪ್ರಣಯ ಪ್ರದರ್ಶನ ಮಾಡುತ್ತದೆ.

ಬೂದು ತಲೆಯ ಸ್ವಾಂಪ್‌ಹೆನ್ 'ಪೋರ್ಫಿರಿಯೊ' ಪ್ರಬೇಧದ ಹದಿಮೂರು ಜಾತಿಗಳ ಪೈಕಿ ಒಂದು. ಇದರಲ್ಲಿ ಒಟ್ಟು ಮೂರು ಉಪಜಾತಿಗಳಿವೆ. ಅವುಗಳೆಂದರೆ ಮೊದಲನೆಯದು, 'ಪೋಲಿಯೊಸೆಫಾಲಸ್ ಲ್ಯಾಥಮ್'. ಇವು ಭಾರತ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳು) ಮತ್ತು ಶ್ರೀಲಂಕಾ ದಕ್ಷಿಣ ಚೀನಾ ಮತ್ತು ಉತ್ತರ ಥೈಲ್ಯಾಂಡಲ್ಲಿ ಕಾಣಸಿಗುತ್ತವೆ. ಎರಡನೆಯದು, 'ಸೀಸ್ಟಾನಿಕಸ್ ಜರುಡ್ನಿ ಮತ್ತು ಹಾರ್ಮ್', ಇದು ಇರಾಕ್ ಮತ್ತು



ದಕ್ಷಿಣ ಇರಾನ್ ಪಾಕಿಸ್ತಾನ, ಅಫ್ಘಾನಿಸ್ತಾನ ಮತ್ತು ವಾಯುವ್ಯ ಭಾರತ ಹಾಗೂ ಫ್ಲೋರಿಡಾದಲ್ಲೂ ಕಾಣಸಿಗುತ್ತವೆ. ಮೂರನೆಯದು, 'ಕ್ಯಾಸ್ಪಿಯಸ್ ಹಾರ್ಟರ್ಟ್', ಇವು ಕ್ಯಾಸ್ಪಿಯನ್ ಸಮುದ್ರ, ವಾಯುವ್ಯ ಇರಾನ್ ಮತ್ತು ಟರ್ಕಿಗಳಲ್ಲಿ ಕಾಣಸಿಗುತ್ತವೆ.

ಆಕ್ರಮಣಕಾರಿ ಪ್ರಭೇದ

1990ರ ದಶಕದ ಉತ್ತರಾರ್ಧದಲ್ಲಿ ಫ್ಲೋರಿಡಾದ ಪೆಂಬ್ರೋಕ್ ಪೈನ್ಸ್ ಪಟ್ಟಣದಲ್ಲಿ ಗೂಡಿನಲ್ಲಿಟ್ಟು ಸಂತಾನೋತ್ಪತ್ತಿ ಮಾಡುವ ಮೂಲಕ ಪಕ್ಷಿಸಾಕಣೆಯ ಭಾಗವಾಗಿ ಬೂದು ತಲೆಯ ಸ್ವಾಂಪ್‌ಹೆನ್ ಪಕ್ಷಿಗಳನ್ನು ಉತ್ತರ ಅಮೆರಿಕಾಕ್ಕೆ ಪರಿಚಯ ಮಾಡಲಾಯಿತು. ಇವುಗಳ ಆಕ್ರಮಣಕಾರಿ ಮನೋಭಾವದ ಕಾರಣಕ್ಕೆ ವನ್ಯಜೀವಿ ಜೀವಶಾಸ್ತ್ರಜ್ಞರು ಈ ಪಕ್ಷಿಗಳನ್ನು ನಿರ್ಮೂಲನೆ ಮಾಡಲು ಪ್ರಯತ್ನಿಸಿದರು, ಆದ–ರೆ ಅವುಗಳ ಸಂಖ್ಯೆಯು ಅಗಾಧವಾಗಿದ್ದು, ಇಲ್ಲಿನ ಪಕ್ಷಿವಿಜ್ಞಾನ ಅಧಿಕಾರಿಗಳು ಸ್ವಾಂಪ್‌ಹೆನ್ ಫ್ಲೋರಿಡಾದ ಪಕ್ಷಿಸಂಕುಲದ ಒಂದು ಭಾಗವಾಗುವ ಸಾಧ್ಯತೆಯಿದೆ ಎಂದು ಹೇಳಿದ್ದಾರೆ. ಈ ಪಕ್ಷಿಗಳನ್ನು 2013ರಲ್ಲಿ 'ಅಮೇರಿಕನ್ ಬರ್ಡಿಂಗ್ ಅಸೋಸಿಯೇಷನ್' ಪಟ್ಟಿಗೆ ಸೇರಿಸಲಾಗಿದೆ.

ಗ್ರೇ ಸ್ವಾಂಪ್‌ಹೆನ್ (ಉಚಿಡಿಥಿ ಖತಿಚಿಟಠಿ ಛಜಟಿ) ಎಂದು ಕರೆಯಲಾಗುವ ಈ ಪಕ್ಷಿಗಳು ಜಮ್ಮುವಿನ ಪ್ರಸಿದ್ಧ ಆರ್ದ್ರಭೂಮಿ ಘರಾನಾ ವೆಟ್‌ಲ್ಯಾಂಡ್‌ನಲ್ಲಿ (ಉಚಿಡಿಚಿಟಿಚಿ ಘಜಣಟಚಿಟಿಜ) ಹೆಚ್ಚು ಕಾಣಿಸುವ ಒಂದು ಸುಂದರ ಜಲಪಕ್ಷಿ. ಇವು ಕೋಳಿಯ ಗಾತ್ರದಷ್ಟಿದ್ದು, ಇದರ ಇಡೀ ದೇಹವು ಆಕರ್ಷಕ ನೀಲಿ–ನೇರಳೆ (ಃಟಣ್ಝು–ಕಣಡಿ–ಠಿಟಜ) ಬಣ್ಣ ಮತ್ತು ತಲೆಯ ಭಾಗವು ತಿಳಿಗೆಂಪು ಬಣ್ಣದಲ್ಲಿರುತ್ತದೆ. ಇವುಗಳ ಗಟ್ಟಿಯಾದ ಕೊಕ್ಕು ಮತ್ತು ಹಣೆಯ ಮೇಲಿರುವ ಕವಚವು (ಈಡಿಠಟಿಣಚಿಟ, ಛಜಟಜ) ಗಾಢ ಕೆಂಪು ಬಣ್ಣದಲ್ಲಿರುತ್ತವೆ. ಇದರ ಕಾಲುಗಳು ಮತ್ತು ಉದ್ದನೆಯ ಬೆರಳುಗಳು ಕೆಂಪು ಬಣ್ಣದಲ್ಲಿದ್ದು,





ಜೌಗು ಪ್ರದೇಶದ ಜಲಸಸ್ಯಗಳ ಮೇಲೆ ಸುಲಭವಾಗಿ ನಡೆಯಲು ಸಹಾಯ ಮಾಡುತ್ತವೆ. ಇವು ನಡೆಯುವಾಗ ತನ್ನ ಬಾಲವನ್ನು ಮೇಲೆ ಕೆಳಗೆ ಆಡಿಸುತ್ತವೆ. ಆಗ ಅವುಗಳ ಬಾಲದ ಕೆಳಗಿರುವ ಬಿಳಿ ಬಣ್ಣದ ಗರಿಗಳು ಎದ್ದು ಕಾಣುತ್ತವೆ.

ಘರಾನಾ ಪಕ್ಷಿಧಾಮ

ಜಮ್ಮು ನಗರದಿಂದ ಸುಮಾರು 35 ಕಿ.ಮೀ ದೂರದಲ್ಲಿ ಆರ್. ಎಸ್ ಪುರದಲ್ಲಿ 'ಘರಾನಾ ಆರ್ದ್ರಭೂಮಿ' (ಉಚಿಡಿಚಿಟಿಚಿ ಘಜಣ–ಟಚಿಟಿಜ) ಎನ್ನುವ ಜೌಗು ಪ್ರದೇಶವಿದೆ. ಚಳಿಗಾಲದಲ್ಲಿ ಇಲ್ಲಿಗೆ ಬರುವ ಸಾವಿರಾರು ವಲಸೆ ಹಕ್ಕಿಗಳ ಜೊತೆಗೆ ಈ 'ಸ್ವಾಂಪ್‌ಹೆನ್' ಪಕ್ಷಿಗಳನ್ನು ಇಲ್ಲಿ ವೀಕ್ಷಿಸಬಹುದು. ಪ್ರತೀ ವರ್ಷ ಅಕ್ಟೋಬರ್‌ನಿಂದ ಮಾರ್ಚ್ವರೆಗೆ 6,000 ಕ್ಕೂ ಹೆಚ್ಚು ಸ್ವಾಂಪ್‌ಹೆನ್ ಪಕ್ಷಿಗಳು ಇಲ್ಲಿಗೆ ವಲಸೆ ಬರುವುದ–ರಿಂದ ಇದು 'ಪಕ್ಷಿ ವೀಕ್ಷಕರ ಸ್ವರ್ಗ'ವಾಗಿದೆ. ಪ್ರತೀ ವರ್ಷವೂ ಸಾವಿರಾರು ವಲಸೆ ಹಕ್ಕಿಗಳು ಜಮ್ಮುವಿನ ಅಂತರರಾಷ್ಟ್ರೀಯ ಗಡಿಯ ಬಳಿಯ ಘರಾನಾ ಜೌಗು ಭೂಮಿ ಸಂರಕ್ಷಣಾ ಮೀಸಲು ಪ್ರದೇಶಕ್ಕೆ ಬರುತ್ತವೆ. ಇಲ್ಲಿಗೆ ಆಗಮಿಸುವ ಪಕ್ಷಿವೀಕ್ಷಕರು ಮತ್ತು ಸಂದರ್ಶಕರಿಗೆ ವನ್ಯಜೀವಿ ಇಲಾಖೆ ಪಕ್ಷಿವೀಕ್ಷಣೆಯ ವ್ಯವಸ್ಥೆಯನ್ನು ಮಾಡಿದೆ.

ಜಮ್ಮು ಮತ್ತು ಕಾಶ್ಮೀರದ ಸ್ಥಳೀಯ ಭಾಷೆಯಲ್ಲಿ (ಕಾಶ್ಮೀರಿ) ಇದನ್ನು 'ವಾನ್ ಟೆಕ್' (ಘಚಿಟಿ ಣಜಛಿ) ಎಂದು ಮತ್ತು ಹಿಂದಿಯಲ್ಲಿ ಇದನ್ನು 'ಜಾಮುನಿ ಜಲಮುರ್ಗಿ' ಎನ್ನುತ್ತಾರೆ. ಇವು ಸಸ್ಯಹಾ–ರಿಗಳಾಗಿದ್ದು, ಜಲಸಸ್ಯಗಳ ಮೃದು ಚಿಗುರುಗಳು ಮತ್ತು ಕಾಂಡಗಳನ್ನು ತಿನ್ನುತ್ತವೆ. ಕೆಲವೊಮ್ಮೆ ಸಣ್ಣ ಕೀಟಗಳು, ಮೃದ್ವಂಗಿಗಳು (ಖಟಿಚುಟ) ಮತ್ತು ಕಪ್ಪೆಗಳನ್ನೂ ತಿನ್ನುತ್ತವೆ. ಇವು ಸಣ್ಣದಾಗಿ ಗರ್ರ್ ಗರ್ರ್ ಎನ್ನುವ ಮೂಗಿನ ಧ್ವನಿ ಅಥವಾ ಕಪ್ಪೆಗಳು ಕೂಗುವಂತಹ ಕರ್ಕಶ ಶಬ್ದಗಳನ್ನು ಮಾಡುತ್ತವೆ. ಇವು ಜೊಂಡು ಹುಲ್ಲು ಮತ್ತು ನೀರಿನಲ್ಲಿ ತೇಲುವ ಸಸ್ಯಗಳ ಮೇಲೆ ನಡೆಯುವುದನ್ನು ನೋಡುವುದೇ ಕಣ್ಣಿಗೆ ಹಬ್ಬ. ಇವು ನೀರಿನ ಮೇಲಿರುವ ದಟ್ಟವಾದ ಜೊಂಡು ಅಥವಾ ಹುಲ್ಲಿನ ಪೊದೆಗಳ ನಡುವೆ ಇವು ಗೂಡುಗಳನ್ನು ನಿರ್ಮಿಸುತ್ತವೆ.

ದಟ್ಟವಾದ ಹುಲ್ಲು ಇರುವ ನೀರಿನ ಅಂಚುಗಳ ಬಳಿ ಈ ಪಕ್ಷಿಗಳು ಹೆಚ್ಚಾಗಿ ಕಾಣಿಸುವುದರಿಂದ ಪಕ್ಷಿಗಳನ್ನು ಬೆದರಿಸದೆ ಸುರಕ್ಷಿತ ದೂರದಿಂದ ಸ್ಪಷ್ಟವಾಗಿ ನೋಡಲು ಬೈನಾಕ್ಯುಲರ್ ಬಳಸುವುದು ಉತ್ತಮ. ಇವುಗಳು ಪ್ರಕೃತಿಯ ಅಮೂಲ್ಯ ಜೀವಸಂಕುಲ ಆಗಿದ್ದು, ಪರಿಸರ ವ್ಯವಸ್ಥೆಯ ಸಮತೋಲನ ಕಾಪಾಡಿ ಮಾನುಷ್ಯನ ಜೀವನದಲ್ಲಿ ಪ್ರಮುಖ ಪಾತ್ರವಹಿಸುತ್ತವೆ. ಇವು ಆಹಾರ ಸರಪಳಿಯ ಪ್ರಮುಖ ಭಾಗವಾಗಿದ್ದು, ಕೀಟಗಳು ಮತ್ತು ಸಸ್ಯಗಳ ಸಂಖ್ಯೆಯನ್ನು ನಿಯಂತ್ರಿಸುತ್ತವೆ. ಇವು ಹೂವಿನ ಮಕರಂದವನ್ನು ಹೀರಿ ಪರಾಗಸ್ಪರ್ಶ ಮಾಡಿ, ಸಸ್ಯಗಳ ಸಂತಾನೋತ್ಪತ್ತಿ ಮತ್ತು ಹಣ್ಣು ಮತ್ತು ಕಾಯಿಗಳ ಇಳುವರಿ ಹೆಚ್ಚಿಸುತ್ತದೆ. ಹಾಗಾಗಿ ಸ್ವಾಂಪ್‌ಹೆನ್ ಪಕ್ಷಿಗಳ ಸಂರಕ್ಷಣೆ ನಮ್ಮೆಲ್ಲರ ಕರ್ತವ್ಯ.



ಲೇಖನ
■ **ಸಂತೋಷ್ ರಾವ್ ಪೆರ್ಮುಡ**
ಪಟ್ರಮೆ ಗ್ರಾಮ ಮತ್ತು ಅಂಚೆ
ಬೆಳ್ತಂಗಡಿ ತಾಲೂಕು, ದ.ಕ ಜಿಲ್ಲೆ
ದೂ: 9742884160

ಹಚ್ಯಾಳ ಗ್ರಾಮದಲ್ಲಿ ವ್ಯಕ್ತಿಯ ಬರ್ಬರ ಹತ್ಯೆ!

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ತಾಲೂಕಿನ ಹಚ್ಯಾಳ ಗ್ರಾಮದ ಕರೆಪ್ಪ ಚಂದ್ರಾಮ ಬಿರಾದಾರ (55) ಕೊಲೆಯಾದ ವ್ಯಕ್ತಿ. ಇವರು ಒಕ್ಕಲುತನ ಮಾಡಿಕೊಂಡು ಜೀವನ ನಡೆಸುತ್ತಿದ್ದರು. ನ.24ರಂದು ಸಂಜೆ 7 ಗಂಟೆಯಿಂದ ನ.25ರ ಬೆಳಗಿನ 6 ಗಂಟೆಯ ನಡುವಿನ ಅವಧಿಯಲ್ಲಿ ಹಚ್ಯಾಳ ಗ್ರಾಮದ ರಿ.ಸ.ನಂ. 150/2ರ ಜಮೀನಿನಲ್ಲಿರುವ ಪತ್ರಾಸ್ ಶೆಡ್‌ನಲ್ಲಿ ಈ ಘಟನೆ ನಡೆದಿದೆ ಎಂದು ಪ್ರಕರಣದಲ್ಲಿ ದಾಖಲಾಗಿದೆ.

ಪ್ರಾಥಮಿಕ ದೂರಿನ ಪ್ರಕಾರ, ದುಷ್ಕರ್ಮಿಗಳು ಯಾವುದೋ ಉದ್ದೇಶದಿಂದ ಹರಿತವಾದ ಆಯುಧದಿಂದ ಕರೆಪ್ಪ ಅವರ ಬಲಗಣ್ಣಿನ ಕೆಳಭಾಗದಿಂದ ಬಲಕಿವಿಯವರೆಗೆ, ಮೂಗಿನ ಮೇಲೆ ಹಾಗೂ ಬಲಹುಬ್ಬಿನ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿ ತೀವ್ರ ರಕ್ತಗಾಯಗೊಳಿಸಿ ಕೊಲೆ ಮಾಡಿದ್ದಾರೆ ಎಂದು ದೂರಿನಲ್ಲಿ ತಿಳಿಸಲಾಗಿದೆ.

ಈ ಕುರಿತು ಮೃತರ ಪತ್ನಿ ನೀಡಿದ ದೂರಿನ ಮೇರೆಗೆ ಪ್ರಕರಣ ದಾಖಲಿಸಿಕೊಂಡು, ಕೊಲೆ ಮಾಡಿದ ಆರೋಪಿಗಳನ್ನು ಪತ್ತೆಹಚ್ಚಿ ಕಾನೂನು ಕ್ರಮ ಕೈಗೊಳ್ಳುವಂತೆ ಪೊಲೀಸರಿಗೆ ಮನವಿ ಮಾಡಿದ್ದಾರೆ. ಕೊಲೆಗೆ ನಿಖರ ಕಾರಣವೇನು? ಈ ಕೃತ್ಯ ಎಸಗಿದವರು ಯಾರು? ಎಂಬುದನ್ನು ಪೊಲೀಸ್ ತನಿಖೆಯಿಂದ ತಿಳಿದು ಬರಬೇಕಿದೆ. ಈ ಪ್ರಕರಣ ಸಿಂದಗಿ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ.

ಡಿ. 4ರಂದು ಮಿನಿ ಉದ್ಯೋಗ ಮೇಳ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ವತಿಯಿಂದ ಡಿ. 4ರಂದು ನಗರದ ಸೋಲಾಪುರ ರಸ್ತೆಯಲ್ಲಿರುವ ಸರ್ಕಾರಿ ಐಟಿಐ ಕಾಲೇಜಿನಲ್ಲಿ ಮಿನಿ ಉದ್ಯೋಗ ಮೇಳವನ್ನು ಆಯೋಜಿಸಲಾಗಿದೆ.

ಈ ಉದ್ಯೋಗ ಮೇಳದಲ್ಲಿ 10ಕ್ಕೂ ಹೆಚ್ಚು ಪ್ರತಿಷ್ಠಿತ ಕಂಪನಿಗಳು ಭಾಗವಹಿಸಲಿದ್ದು, ಎಸ್–ಎಸ್‌ಎಲ್‌ಸಿ, ಪಿಯುಸಿ, ಐಟಿಐ, ಡಿಪ್ಲೊಮಾ ಹಾಗೂ ಯಾವುದೇ ಪದವಿ ಉತ್ತೀರ್ಣರಾದ ಆಸಕ್ತ ಅಭ್ಯರ್ಥಿಗಳು ಉದ್ಯೋಗ ಮೇಳದಲ್ಲಿ ಭಾಗವಹಿಸಬಹುದಾಗಿದೆ.

ಉದ್ಯೋಗಾಕಾಂಕ್ಷಿಗಳು ತಮ್ಮ ಸ್ವ ವಿವರ ಹಾಗೂ ಅಗತ್ಯ ಶೈಕ್ಷಣಿಕ ದಾಖಲೆಗಳೊಂದಿಗೆ ಡಿ. 4ರಂದು ನಿಗದಿತ ಸ್ಥಳಕ್ಕೆ ಆಗಮಿಸಿ, ಉದ್ಯೋಗ ಮೇಳದ ಸದುಪಯೋಗ ಪಡೆದುಕೊಳ್ಳುವಂತೆಯೂ ಈ ಬಗ್ಗೆ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಕಚೇರಿಯನ್ನು ಖುದ್ದಾಗಿ ಸಂಪರ್ಕಿಸಬಹುದು ಅಥವಾ ಮೋ: 9945000793 ಹಾಗೂ ಮೊ:9008605031 ಕರೆ ಮಾಡಿ ಮಾಹಿತಿ ಪಡೆಯಬಹುದು ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿಗಳ ಪ್ರಕಟಣೆ ತಿಳಿಸಿದೆ.

ಉದ್ಯೋಗ ಸೇತು: ಏಕೀಕೃತ ಡಿಜಿಟಲ್ ಪೋರ್ಟಲ್

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ರಾಜ್ಯದ ನಿರುದ್ಯೋಗಿ ಯುವಜನತೆಗೆ ಸೂಕ್ತ ಉದ್ಯೋಗಾವಕಾಶಗಳನ್ನು ಕಲ್ಪಿಸುವ ಹಾಗೂ ಉದ್ಯೋಗದಾತರು ಮತ್ತು ಉದ್ಯೋಗಾಕಾಂಕ್ಷಿಗಳ ನಡುವೆ ನೇರ ಸಂಪರ್ಕ ಏರ್ಪಡಿಸುವ ಉದ್ದೇಶದಿಂದ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಆಯುಕ್ತಾಲಯದ ವತಿಯಿಂದ ಉದ್ಯೋಗ ಸೇತು ಎಂಬ ಏಕೀಕೃತ ಡಿಜಿಟಲ್ ಪೋರ್ಟಲ್ ಅನುಷ್ಠಾನಗೊಳಿಸಲಾಗಿದೆ.

ಈಪೋರ್ಟಲ್‌ಮೂಲಕಉದ್ಯೋಗಾಕಾಂಕ್ಷಿಗಳು ತಮ್ಮ ಅರ್ಹತೆ ಮತ್ತು ಕೌಶಲ್ಯಗಳಿಗೆ ಅನುಗುಣವಾಗಿ ಉದ್ಯೋಗಾವಕಾಶಗಳನ್ನು ಪಡೆದುಕೊಳ್ಳಲು ಅನುಕೂಲ ಕಲ್ಪಿಸಲಾಗಿದೆ. ಆದ್ದರಿಂದ ಆಸಕ್ತ ನಿರುದ್ಯೋಗಿ ಯುವಜನತೆ https://yuvaudyogasethu.karnataka.gov.in ವೆಬ್‌ಸೈಟ್‌ಗೆ ಭೇಟಿ ನೀಡಿ ನೋಂದಣಿ ಮಾಡಿಕೊಂಡು ಈ ಸೌಲಭ್ಯದ ಸದುಪಯೋಗ ಪಡೆದುಕೊಳ್ಳಬೇಕು.

ವಿಶೇಷವಾಗಿ, ಯುವನಿಧಿ ಯೋಜನೆಯಡಿ ಸೇವಾಸಿಂಧು ಪೋರ್ಟಲ್‌ನಲ್ಲಿ ಈಗಾಗಲೇ ನೋಂದಣಿ ಮಾಡಿಕೊಂಡಿರುವ ಅಭ್ಯರ್ಥಿಗಳು ಉದ್ಯೋಗ ಸೇತು ಪೋರ್ಟಲ್‌ನಲ್ಲಿಯೂ ಕಡ್ಡಾಯವಾಗಿ ನೋಂದಣಿ ಮಾಡಿಕೊಳ್ಳಬೇಕು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ದೂರವಾಣಿ ಸಂಖ್ಯೆ 08352250383 ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿಗಳ ಪ್ರಕಟಣೆ ತಿಳಿಸಿದೆ.

ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಶ್ರೀ ನಾರಾಯಣಗುರು ಅಭಿವೃದ್ಧಿ ನಿಗಮದ ವತಿಯಿಂದ 2026–27ನೇ ಸಾಲಿಗೆ ಅನುಷ್ಠಾನಗೊಳಿಸುತ್ತಿರುವ ಸ್ವಯಂ ಉದ್ಯೋಗ ವೈಯಕ್ತಿಕ ಸಾಲ ಯೋಜನೆ, ಗಂಗಾ ಕಲ್ಯಾಣ ನೀರಾವರಿ ಯೋಜನೆ, ಅರಿವು ಶೈಕ್ಷಣಿಕ ಸಾಲ ಯೋಜನೆ, ಸ್ವಾವಂಬಿ ಸಾರಥಿ ಯೋಜನೆಗಳಡಿ ಅರ್ಹ ಫಲಾನುಭವಿಗಳಿಂದ ಸಾಲ ಸೌಲಭ್ಯ ಪಡೆಯಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಡಿ.16 ಕೊನೆಯ ದಿನವಾಗಿರುತ್ತದೆ. ಅರ್ಹ ಫಲಾನುಭವಿಗಳು ಅರ್ಜಿಸಲ್ಲಿಸಲು ಆಧಾರ್ ಜೋಡಣೆಯಾದ ಚಾಲ್ತಿಯಲ್ಲಿರುವ ಬ್ಯಾಂಕ್ ಖಾತೆ ಹೊಂದಿರಬೇಕು. ಆಧಾರ್ ಕಾರ್ಡ್‌ನಲ್ಲಿರುವಂತೆ ಅರ್ಜಿದಾರರ ಹೆಸರು, ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಬ್ಯಾಂಕ್ ಪಾಸ್ ಪುಸ್ತಕದಲ್ಲಿ ಹೊಂದಾಣಿಕೆಯಾಗಬೇಕು.

ಈ ಹಿಂದೆ ನಿಗಮದ ಯಾವುದೇ ಯೋಜನೆಯಡಿ ಸೌಲಭ್ಯ ಪಡೆದವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.

ಆಸಕ್ತರು ಸೇವಾ–01 ಪೋರ್ಟಲ್ http://sevaone.karnataka.gov.in ಮೂಲಕ ಗ್ರಾಮ ಒನ್, ಬೆಂಗಳೂರು ಒನ್ ಹಾಗೂ ಕರ್ನಾಟಕ ಒನ್ ಸೇವಾ ಕೇಂದ್ರಗಳಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ನಿಗಮದ ಕಚೇರಿಯ ಸಹಾಯವಾಣಿ ಸಂಖ್ಯೆ 080–22374832, 8050770004 ಹಾಗೂ 8050770005ಅನ್ನು ಸಂಪರ್ಕಿಸಬಹುದು ಎಂದು ಶ್ರೀ ನಾರಾಯಣಗುರು ಅಭಿವೃದ್ಧಿ ನಿಗಮದ ನಿಗಮ ಜಿಲ್ಲಾ ವ್ಯವಸ್ಥಾಪಕರ ಪ್ರಕಟಣೆ ತಿಳಿಸಿದೆ.

ವಿವಿಧ ಸಾಲ ಸೌಲಭ್ಯ ಯೋಜನೆಗಳಿಗೆ ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕರ್ನಾಟಕ ರಾಜ್ಯ ಕುಂಬಾರ ಸಮುದಾಯ ಅಭಿವೃದ್ಧಿ ನಿಗಮದ ವತಿಯಿಂದ 2026–27ನೇ ಸಾಲಿನಲ್ಲಿ ವಿವಿಧ ಸಾಲ ಸೌಲಭ್ಯ ಯೋಜನೆಗಳಡಿ ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಹಿಂದುಳಿದ ವರ್ಗಗಳ ಪ್ರವರ್ಗ–2ಎ ಅಡಿಯಲ್ಲಿ 6(ಎ) ರಿಂದ 6(ಕ್ಯೂ) ವರೆಗಿನ ವರ್ಗಗಳಿಗೆ ಸೇರಿದ ಅರ್ಹ ಫಲಾನುಭವಿಗಳು ಸ್ವಯಂ ಉದ್ಯೋಗ ವೈಯಕ್ತಿಕ ಸಾಲ ಯೋಜನೆ, ಅರಿವು ಶೈಕ್ಷಣಿಕ ಸಾಲ ಯೋಜನೆ ಹಾಗೂ ಸ್ವಾವಲಂಬಿ ಸಾರಥಿ ಯೋಜನೆಗಳಡಿ ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿ ಸಲ್ಲಿಸಲು ಡಿಸೆಂಬರ್ 16 ಕೊನೆಯ ದಿನವಾಗಿದೆ. ಈ ಹಿಂದೆ ನಿಗಮದ ಯಾವುದೇ ಯೋಜನೆಯಡಿ ಸೌಲಭ್ಯ ಪಡೆದಿರುವ ಫಲಾನುಭವಿಗಳು ಹಾಗೂ ಅವರ ಕುಟುಂಬದ ಸದಸ್ಯರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿ ಸಲ್ಲಿಸಲು ಅರ್ಹರಾಗಿರುವುದಿಲ್ಲ.

ಅರ್ಹ ಅಭ್ಯರ್ಥಿಗಳು ಸೇವಾ ಒನ್ ಪೋರ್ಟಲ್ https://sevaone.karnataka.gov.in ಮೂಲಕ ಗ್ರಾಮ ಒನ್, ಬೆಂಗಳೂರು ಒನ್ ಹಾಗೂ ಕರ್ನಾಟಕ ಒನ್ ಸೇವಾ ಕೇಂದ್ರಗಳಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ನಿಗಮದ ವೆಬ್‌ಸೈಟ್ https://bcwd.karnataka.gov.in/kumbaradc/public ಅಥವಾ ದೂರವಾಣಿ ಸಂಖ್ಯೆಗಳಾದ 080–22374832, 8050770004 ಹಾಗೂ 8050770005 ಸಂಪರ್ಕಿಸಬಹುದು ಎಂದು ಕರ್ನಾಟಕ ರಾಜ್ಯ ಕುಂಬಾರ ಸಮುದಾಯ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರ ಪ್ರಕಟಣೆ ತಿಳಿಸಿದೆ.

ಕ್ರೀಡೆಗಳಿಂದ ದೈಹಿಕ, ಮಾನಸಿಕ ಆರೋಗ್ಯದ ಜತೆಗೆ ಶಿಸ್ತು, ಸಮಯಪ್ರಜ್ಞೆ ವೃದ್ಧಿ: ಜಿಲ್ಲಾಧಿಕಾರಿ ಇಕ್ರಂ ಶರೀಫ್

ಕಲಬುರಗಿ:ಪೊಲೀಸ್ ಸಿಬ್ಬಂದಿಯ ದೈನಂದಿನ ಕರ್ತವ್ಯದ ಒತ್ತಡದ ನಡುವೆ ಕ್ರೀಡೆಗಳು ದೈಹಿಕ ಮತ್ತು ಮಾನಸಿಕ ಆರೋಗ್ಯವನ್ನು ಕಾಪಾಡಿಕೊಳ್ಳಲು ಸಹಕಾರಿಯಾಗುತ್ತವೆ. ಕ್ರೀಡೆಗಳು ವ್ಯಕ್ತಿಯಲ್ಲಿ ಶಿಸ್ತು, ಸಮಯಪ್ರಜ್ಞೆ, ಆತ್ಮವಿಶ್ವಾಸ ಹಾಗೂ ತಂಡದ ಮನೋಭಾವವನ್ನು ಬೆಳೆಸುತ್ತವೆ ಎಂದು ಜಿಲ್ಲಾಧಿಕಾರಿ ಇಕ್ರಂ ಶರೀಫ್ ಹೇಳಿದರು.

ನಗರದ ಜಿಲ್ಲಾ ಪೊಲೀಸ್ ಕವಾಯತು ಮೈದಾನದಲ್ಲಿ ಇಂದು ಜಿಲ್ಲಾ ಪೊಲೀಸ್ ಇಲಾಖೆಯ ವತಿಯಿಂದ ಆಯೋಜಿಸಲಾಗಿದ್ದ ಜಿಲ್ಲಾ ಪೊಲೀಸ್ ವಾರ್ಷಿಕ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಪೊಲೀಸ್ ಇಲಾಖೆಯ ಸಿಬ್ಬಂದಿ ಹಗಲಿರುಳು ಸಾರ್ವಜನಿಕರ ಸೇವೆಯಲ್ಲಿ ತೊಡಗಿಸಿಕೊಂಡಿರುತ್ತಾರೆ. ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವುದು, ಸಾರ್ವಜನಿಕರ ಸುರಕ್ಷತೆ ಖಚಿತಪಡಿಸುವುದು ಸೇರಿದಂತೆ ಹಲವು ಜವಾಬ್ದಾರಿಗಳನ್ನು ನಿರ್ವಹಿಸುತ್ತಾರೆ. ಇಂತಹ ಕಾರ್ಯದೊತ್ತಡದ ನಡುವೆಯೂ ಕ್ರೀಡಾಕೂಟ ಆಯೋಜಿಸಿ ಸಿಬ್ಬಂದಿಗೆ ತಮ್ಮ ಪ್ರತಿಭೆ ಪ್ರದರ್ಶಿಸಲು ಅವಕಾಶ ಕಲ್ಪಿಸಿರುವುದು ಉತ್ತಮ ಬೆಳವಣಿಗೆಯಾಗಿದೆ ಎಂದರು.

ಕ್ರೀಡೆಗಳು ಕೇವಲ ಮನರಂಜನೆಗೆ ಸೀಮಿತವಾಗಿಲ್ಲ. ಆರೋಗ್ಯಕರ ಜೀವನಶೈಲಿಗೆ ಪ್ರೇರಣೆ ನೀಡುವುದರ ಜತೆಗೆ ಪರಸ್ಪರ ಸಹಕಾರ, ಸ್ನೇಹ ಮತ್ತು ಒಗ್ಗಟ್ಟಿನ ಭಾವನೆಯನ್ನು ಗಟ್ಟಿಗೊಳಿಸುತ್ತವೆ. ಪ್ರತಿಯೊಬ್ಬರೂ ತಮ್ಮ ದೈನಂದಿನ ಜೀವನದಲ್ಲಿ ವ್ಯಾಯಾಮ ಹಾಗೂ ಕ್ರೀಡೆಗಳಿಗೆ ಹೆಚ್ಚಿನ ಆದ್ಯತೆ ನೀಡಬೇಕು. ಇದರಿಂದ ದೈಹಿಕ ಸಾಮರ್ಥ್ಯ ವೃದ್ಧಿಯಾಗುವುದರ ಜತೆಗೆ ಮಾನಸಿಕ ಒತ್ತಡವನ್ನು ಕಡಿಮೆ ಮಾಡಿಕೊಳ್ಳಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಕ್ರೀಡಾಕೂಟದಲ್ಲಿ ಭಾಗವಹಿಸುವವರು ಗೆಲುವನ್ನೇ ಗುರಿಯಾಗಿಸಿಕೊಳ್ಳದೆ ಕ್ರೀಡಾ ಮನೋಭಾವದಿಂದ ಸ್ಪರ್ಧೆಗಳಲ್ಲಿ ಪಾಲ್ಗೊಳ್ಳಬೇಕು. ಸೋಲು–ಗೆಲುವನ್ನು ಸಮಾನವಾಗಿ ಸ್ವೀಕರಿಸುವ ಗುಣ ಬೆಳೆಸಿಕೊಳ್ಳಬೇಕು. ಗೆಲುವು ಸಾಧಿಸಿದವರು ಮತ್ತಷ್ಟು ಸಾಧನೆಗೆ ಪ್ರಯತ್ನಿಸಬೇಕು. ಸೋತವರು ನಿರಾಶರಾಗದೆ ಮುಂದಿನ ಸ್ಪರ್ಧೆಗಳಿಗೆ ಹೆಚ್ಚಿನ ಸಿದ್ಧತೆ ಮಾಡಿಕೊಳ್ಳಬೇಕು.

ಅಥಣಿ ಡಿಎಸ್ಸೆಸ್ ಘಟಕದ ಕಾರ್ಯ ರಾಜ್ಯಕ್ಕೆ ಮಾದರಿ :ತಳವಲಕರ

■ ಉದಯರಶ್ಮಿ ದಿನಪತ್ರಿಕೆ



ಅಥಣಿ: ಲಿಖಿತ ಪರೀಕ್ಷೆಯ ಮೂಲಕ ಮಕ್ಕಳ ಪ್ರತಿಭೆಯನ್ನು ಹೊರತರುತ್ತಿರುವ ರಾಜ್ಯದ ಏಕೈಕ ಸಂಘಟನೆ ಎಂದರೆ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ಅಥಣಿ ಘಟಕ. ಇದು ರಾಜ್ಯಕ್ಕೆ ಮಾದರಿಯಾಗಿದೆ ಎಂದು ಜಿಲ್ಲಾ ಸಂಘಟನಾ ಸಂಚಾಲಕ ಸಂಜಯ ತಳವಲಕರ ಹೇಳಿದರು.

ಅವರು ನಗರದ ಪ್ರವಾಸಿ ಮಂದಿರದಲ್ಲಿ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ಅಥಣಿ ಘಟಕದ ವತಿಯಿಂದ ಡಾ.ಬಾಬಾಸಾಹೇಬ ಅಂಬೇಡ್ಕರ್ ಅವರ 70ನೇ ಪರಿನಿರ್ವಾಣ ದಿನದ ಪ್ರಯುಕ್ತ ಹಮ್ಮಿಕೊಂಡಿರುವ 5ನೇ ವರ್ಷದ ರಾಜ್ಯಮಟ್ಟದ ಲಿಖಿತ ಪರೀಕ್ಷೆಯ ಕರಪತ್ರ ಬಿಡುಗಡೆಗೊಳಿಸಿ ಮಾತನಾಡಿದರು.

ಪ್ರತಿ ವರ್ಷ ಸುಮಾರು 400 ರಿಂದ 500 ಮಕ್ಕಳು ಈ ಪರೀಕ್ಷೆ ಬರೆಯುತ್ತಾರೆ. ಡಾ.ಬಾಬಾಸಾಹೇಬ ಅಂಬೇಡ್ಕರ್, ಸಂವಿಧಾನ ಹಾಗೂ ರಾಷ್ಟ್ರಕವಿ ಕುವೆಂಪು ಅವರ ಬಗ್ಗೆ ಪರೀಕ್ಷೆ ಹಮ್ಮಿಕೊಳ್ಳಲಾಗಿದೆ. ಈ ಪರೀಕ್ಷೆಯಿಂದ ಎಲ್ಲ ಮಹಾಪುರುಷರ ಬಗ್ಗೆ ತಿಳಿದುಕೊಳ್ಳಲು ಎಲ್ಲರಿಗೂ ಅವಕಾಶವಾಗುತ್ತದೆ. ಅದಕ್ಕಾಗಿ ಸಂಘಟನೆಯ ಸದಸ್ಯರು ಪ್ರತಿ ಶಾಲೆಗೆ ಹೋಗಿ ಕರಪತ್ರ ನೀಡುವ ವ್ಯವಸ್ಥೆ ಮಾಡಬೇಕು ಎಂದರು.

ಅಥಣಿ ಸಂಚಾಲಕ ರವಿ ಕಾಂಬಳೆ ಮಾತನಾಡಿ, ನಮ್ಮ ಸಂಘಟನೆಯಿಂದ 5ನೇ ವರ್ಷ ಲಿಖಿತ ಪರೀಕ್ಷೆ ಹಮ್ಮಿಕೊಂಡಿದ್ದೇವೆ ಡಾ.ಬಾಬಾಸಾಹೇಬ ಅಂಬೇಡ್ಕರ್, ಭಾರತ ಸಂವಿಧಾನ, ಜಗಜ್ಯೋತಿ ಬಸವೇಶ್ವರ, ಛತ್ರಪತಿ ಶಾಹು ಮಹಾರಾಜ, ಸಾವಿತ್ರಿಬಾಯಿ ಫುಲೆ ಅವರ ಬಗ್ಗೆ ನಾಲ್ಕು ವರ್ಷದಿಂದ ಪರೀಕ್ಷೆ ನಡೆಸಿದ್ದೇವೆ. ಪ್ರತಿ ವರ್ಷ ಒಬ್ಬ ಮಹಾಪುರುಷರನ್ನು ಆಯ್ಕೆ ಮಾಡಿಕೊಂಡು ಬಾಬಾಸಾಹೇಬ ಅಂಬೇಡ್ಕರ್, ಸಂವಿಧಾನದ ಜೊತೆಗೆ ಈ ವರ್ಷ ರಾಷ್ಟ್ರಕವಿ ಕುವೆಂಪು ಅವರ ಬಗ್ಗೆ ಪರೀಕ್ಷೆ ಹಮ್ಮಿಕೊಂಡಿದ್ದೇವೆ.

ನಮ್ಮ ಸಂಘಟನೆಯಿಂದ ಪರೀಕ್ಷೆಯಲ್ಲಿ 1ರಿಂದ 4ನೇ ತರಗತಿ, 5ರಿಂದ 7ನೇ ತರಗತಿ ಹಾಗೂ 8ರಿಂದ 10ನೇ ತರಗತಿ ಎಂದು ವಿಭಾಗ ಮಾಡಿ ಪರೀಕ್ಷೆ ನಡೆಸುತ್ತಿರುವುದು ರಾಜ್ಯದ ಏಕೈಕ ಸಂಘಟನೆ ಎಂದರೆ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ಅಥಣಿ ಘಟಕ ಮಾತ್ರ ಎಂದರು.

ಈ ಸಂದರ್ಭದಲ್ಲಿ ಹಿಂದುಳಿದ ವರ್ಗಗಳ ಸಂಚಾಲಕ ಅಶೋಕ ಚೌಗಲಾ, ದತ್ತು ಕಾಂಬಳೆ, ಅಶೋಕ ನಿಡೋಣಿ, ಗೊರಖನಾಥ ಭಂಡಾರೆ, ಸುರೇಶ ಕಾಂಬಳೆ, ಮಾಯಪ್ಪ ದೊಡಮನಿ, ಸಿದ್ದು ಮುಂಡಗನೂರ, ಬಸವರಾಜ ಕಾಂಬಳೆ, ವಿಠ್ಠಲ ಕಾಂಬಳೆ, ಮಹಾದೇವ ಮಾದರ, ಬೈರು ಕಾಂಬಳೆ, ಲಕ್ಕಪ್ಪ ಕಾಂಬಳೆ, ಮಹೇಶ ಮರಡಿ, ಶಿವಾನಂದ ಕಾಂಬಳೆ, ವಿಕ್ರಮ ಕಾಂಬಳೆ, ಪ್ರಶಾಂತ ಖಾಂಡೇಕರ, ರಾಘವೇಂದ್ರ ಕಾಂಬಳೆ, ಭಾರತೇಶ ಸರಿಕರ, ಬಾಬು ಕಾಂಬಳೆ, ಶಿಲ್ಪಾ ಕಾಂಬಳೆ, ಸತ್ಯವ್ವಾ ನಿಡೋಣಿ, ಭಾರತಿ ವಾಘಮೋರೆ, ಕವಿತಾ ಮಾದರ ಸೇರಿದಂತೆ ಸಂಘಟನೆಯ ಪದಾಧಿಕಾರಿಗಳು ಉಪಸ್ಥಿತರಿದ್ದರು

ಸ್ವಯಂ ಪ್ರೇರಿತ ರಕ್ತದಾನದಿಂದ ಜೀವ ಉಳಿಸಿ :ಡಾ.ಮಾಗಿ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ರಕ್ತದಾನದಿಂದ ಹೃದಯ ಸಂಬಂಧಿ ತೊಂದರೆಗಳ ಅಪಾಯ ಕಡಿಮೆಯಾಗಲು ಸಹಕಾರಿಯಾಗುತ್ತದೆ. ದೇಹದಲ್ಲಿ ಅನಗತ್ಯ ಕೊಬ್ಬಿನ ಸಂಗ್ರಹಣೆಯನ್ನು ನಿಯಂತ್ರಿಸುವಲ್ಲಿ ಸಹ ನೆರವಾಗುತ್ತದೆ ಎಂದು ತಾಲೂಕು ಆರೋಗ್ಯಾಧಿಕಾರಿ ಡಾ.ಎ.ಎ.ಮಾಗಿ ಹೇಳಿದರು.

ಸಿಂದಗಿ ತಾಲೂಕು ಸಾರ್ವಜನಿಕ ಆಸ್ಪತ್ರೆಯಲಿ ತಾಲೂಕು ಆರೋಗ್ಯಾಧಿಕಾರಿಗಳ ಕಾರ್ಯಾಲಯದ ವತಿಯಿಂದ ಆಯೋಜಿಸಿದ್ದ ರಕ್ತದಾನ ಶಿಬಿರಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ರಕ್ತವನ್ನು ಕೃತಕವಾಗಿ ತಯಾರಿಸಲು ಸಾಧ್ಯವಿಲ್ಲದ ಕಾರಣ ಸ್ವಯಂ ಪ್ರೇರಿತ ರಕ್ತದಾನ ಅತ್ಯಂತ ಅವಶ್ಯಕವಾಗಿದೆ. ರಕ್ತದಾನ ಮಹಾದಾನವಾಗಿದ್ದು, ಒಂದು ಯುನಿಟ್ ರಕ್ತದಾನದಿಂದ ಮೂರು ಜೀವಗಳನ್ನು ಉಳಿಸಲು ಸಾಧ್ಯ. ಆದ್ದರಿಂದ ಆರೋಗ್ಯವಂತರು ಸ್ವಯಂ ಪ್ರೇರಿತವಾಗಿ ರಕ್ತದಾನ ಮಾಡುವ ಮೂಲಕ ಜೀವ ಉಳಿಸುವ ಪುಣ್ಯದ ಕಾರ್ಯದಲ್ಲಿ ಕೈಜೋಡಿಸಬೇಕು ಎಂದರು.

ಈ ವೇಳೆ ತಾಲೂಕು ಆಯುಷ್ ವೈದ್ಯಾಧಿಕಾರಿ ಡಾ.ಮಹಾಂತೇಶ ಹಿರೇಮಠ ಮಾತನಾಡಿ, ಸಾಮಾನ್ಯವಾಗಿ 18 ರಿಂದ 65 ವರ್ಷದ ಆರೋಗ್ಯವಂತ ವ್ಯಕ್ತಿಗಳು ವೈದ್ಯಕೀಯ ಮಾನದಂಡಗಳ ಆಧಾರದ ಮೇಲೆ ರಕ್ತದಾನ ಮಾಡಬಹುದು. ಕನಿಷ್ಠ 45ಕೆ.ಜಿ. ತೂಕ, ಸೂಕ್ತ ಹಿಮೋಗ್ಲೋಬಿನ್ ಮಟ್ಟ ಸೇರಿದಂತೆ ಆರೋಗ್ಯದ ಮಾನದಂಡಗಳನ್ನು ಹೊಂದಿರಬೇಕು. ಅಪಘಾತದಲ್ಲಿ ಗಾಯಗೊಂಡವರು, ಶಸ್ತ್ರಚಿಕಿತ್ಸೆಗೊಳಗಾಗುವವರು, ಹೆರಿಗೆ ಹಾಗೂ ಥಲಸೀಮಿಯಾ ರೋಗಿಗಳಿಗೆ ರಕ್ತ ಅತ್ಯಂತ ಅವಶ್ಯಕವಾಗಿದೆ ಎಂದರು.

ತಾಲೂಕುಆರೋಗ್ಯಶಿಕ್ಷಣಾಧಿಕಾರಿಎಸ್.ಡಿ.ಕುಲಕರ್ಣಿ ಸ್ವಾಗತಿಸಿದರು. ಹಿರಿಯ ಪ್ರಯೋಗಾಲಯ ತಂತ್ರಜ್ಞ ರಾಜು ನರಗೋದಿ ನಿರೂಪಿಸಿ ವಂದಿಸಿದರು. ಆಸ್ಪತ್ರ

ಅಕಾಡೆಮಿ–ಪ್ರತಿಷ್ಠಾನಕ್ಕೆ ಭಂಟನಳ್ಳಿ, ಅಂಡಗಿ ನೇಮಕ

■ ಉದಯರಶ್ಮಿ ದಿನಪತ್ರಿಕೆ





ಕಲಬುರಗಿ: ಕರ್ನಾಟಕ ವಚನ ಸಾಹಿತ್ಯ ಅಕಾಡೆಮಿಯ ಕಾರ್ಯಾಧ್ಯಕ್ಷರನ್ನಾಗಿ ಸಂಘಟಕ ರವೀಂದ್ರಕುಮಾರ ಭಂಟನಳ್ಳಿ ಹಾಗೂ ವಿಶ್ವಜ್ಯೋತಿ ಪ್ರತಿಷ್ಠಾನದ ಅಧ್ಯಕ್ಷರನ್ನಾಗಿ ಸಾಂಸ್ಕೃತಿಕ ಸಂಘಟಕ ಶಿವರಾಜ ಎಸ್ ಅಂಡಗಿ ಅವರನ್ನು ನೇಮಕ ಮಾಡಲಾಗಿದೆ ಎಂದು ಅಕಾಡೆಮಿ ಹಾಗೂ ಪ್ರತಿಷ್ಠಾನದ ಸಂಸ್ಥಾಪಕ ವಿಜಯಕುಮಾರ ಪಾಟೀಲ ತೇಗಲತಿಪ್ಪಿ ತಿಳಿಸಿದ್ದಾರೆ.

ಬಸವಾದಿ ಶರಣರ ವಚನ ಸಾಹಿತ್ಯದ ಆಶಯಕ್ಕೆ ತಕ್ಕಂತೆ ಕಾರ್ಯಕ್ರಮಗಳನ್ನು ಸಂಘಟಿಸಿ ಹೊಸ ಪೀಳಿಗೆಯಲ್ಲಿ ವಚನ ಸಾಹಿತ್ಯ ಅರಿವು ಮೂಡಿಸಬೇಕೆಂದು ಮತ್ತು ಜಿಲ್ಲೆಯಲ್ಲಿ ಸಾಂಸ್ಕೃತಿಕ ಚಟುವಟಿಕೆಗಳನ್ನು ಇನ್ನೂ ಹೆಚ್ಚು ಆಯೋಜಿಸುವ ಮೂಲಕ ಈ ನೆಲದ ಹಿರಿಮೆ–ಗರಿಮೆಯನ್ನು ಹೊಸ ಪೀಳಿಗೆಗೆ ಮುಟ್ಟಿಸುವ ಕಾರ್ಯ ಮಾಡಬೇಕೆಂದು ಸೂಚಿಸಲಾಗಿದೆ.

ಗ್ರಾಮೀಣ ಪ್ರತಿಭೆಗಳ ವಿಕಾಸಕ್ಕೆ ಕ್ರೀಡೆ ದಿಕ್ಸೂಚಿ : ನಂದರೆಡ್ಡಿ

■ ಉದಯರಶ್ಮಿ ದಿನಪತ್ರಿಕೆ



ಮುದ್ದೇಬಿಹಾಳ: ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳು ಮೇಳೈಸಿದಾಗ ಮಾತ್ರ ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆ ಸಾಧ್ಯ. ಕ್ರೀಡೆಯು ಮಕ್ಕಳಲ್ಲಿ ದೈಹಿಕ ಕ್ಷಮತೆಯ ಜೊತೆಗೆ ಸೃಜನಶೀಲತೆ, ಶಿಸ್ತು ಮತ್ತು ನಾಯಕತ್ವದ ಗುಣಗಳನ್ನು ಬೆಳೆಸುತ್ತದೆ ಎಂದು ಡಿವೈಎಸ್ಪಿ ಚಂದ್ರಕಾಂತ ನಂದರೆಡ್ಡಿ ಅಭಿಪ್ರಾಯಪಟ್ಟರು.

ಪಟ್ಟಣದ ಆಲಮಟ್ಟಿ ರಸ್ತೆಯ ಬಿಎಎಸ್ ಅಂತರರಾಷ್ಟ್ರೀಯ ಶಾಲೆಯಲ್ಲಿ ಗುರುವಾರ ಶಾಲೆಯ ದ್ವಿತೀಯವಾರ್ಷಿಕೋತ್ಸವದನಿಮಿತ್ತಹಮ್ಮಿಕೊಳ್ಳಲಾಗಿದ್ದ ಕ್ರೀಡೋತ್ಸವವನ್ನು ಸಸಿಗೆ ನೀರುಣಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಗ್ರಾಮೀಣ ಭಾಗದ ಮಕ್ಕಳಿಗೂ ಅಂತರರಾಷ್ಟ್ರೀಯ ಮಟ್ಟದ ಗುಣಮಟ್ಟದ ಶಿಕ್ಷಣ ಒದಗಿಸುತ್ತಿರುವ ಸಂಸ್ಥೆಯ ಕಾರ್ಯ ಶ್ಲಾಘನೀಯ. ಇಂತಹ ಶಿಕ್ಷಣ ಸಂಸ್ಥೆಗಳು ಗ್ರಾಮೀಣ ಪ್ರದೇಶದಲ್ಲಿ ಇನ್ನಷ್ಟು ಬೆಳೆಯಬೇಕು ಎಂದು ಆಶಿಸಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಎಂ.ಬಿ.ಬಡದಾನಿ ಮಾತನಾಡಿ, ಕ್ರೀಡೆಗಳು ದೈಹಿಕ ಸದೃಢತೆಯ ಜೊತೆಗೆ ಮಾನಸಿಕ ಸ್ಥೈರ್ಯವನ್ನೂ ಗಟ್ಟಿಗೊಳಿಸುತ್ತವೆ. ಕ್ರೀಡಾಂಗಣದಲ್ಲಿ ಎದುರಾಗುವ ಸೋಲನ್ನು ಕ್ರೀಡಾಸ್ಫೂರ್ತಿಯಿಂದ ಸ್ವೀಕರಿಸಿ, ಅದನ್ನೇ ಮುಂದಿನ ಸಾಧನೆಗೆ ಮೆಟ್ಟಿಲಾಗಿಸಿಕೊಳ್ಳಬೇಕು. ಸೋಲು ಮುಂದಿನ ಗೆಲುವಿಗೆ ನಾಂದಿ ಎಂಬ ಸತ್ಯವನ್ನು ಪ್ರತಿಯೊಬ್ಬ ವಿದ್ಯಾರ್ಥಿಯೂ ಅರಿಯಬೇಕು. ಗ್ರಾಮೀಣ ಭಾಗದಲ್ಲಿ ಉತ್ತಮ ಶಿಕ್ಷಣ ನೀಡುವ ಸಂಕಲ್ಪದೊಂದಿಗೆ ಆರಂಭವಾದ ಈ ಶಾಲೆಯಲ್ಲಿ ಎರಡೇ ವರ್ಷಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಗಣನೀಯವಾಗಿ ಹೆಚ್ಚಿರುವುದು ಸಂಸ್ಥೆಯ ಗುಣಮಟ್ಟಕ್ಕೆ ಹಿಡಿದ ಕೈಗನ್ನಡಿಯಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಸಂಸ್ಥೆಯ ಸಂಸ್ಥಾಪಕ ಶಿವನಗೌಡ ಬಿರಾದಾರ ಮಾತನಾಡಿ, ಕಳೆದ ಎರಡು ವರ್ಷಗಳಿಂದ ಸಂಸ್ಥೆಯು ಶೈಕ್ಷಣಿಕ ಹಾಗೂ ಕ್ರೀಡಾ ಕ್ಷೇತ್ರದಲ್ಲಿ ಉತ್ತಮ ಸಾಧನೆ ಮಾಡುತ್ತಿದೆ. ಮಕ್ಕಳ ಕ್ರೀಡಾಸ್ಫೂರ್ತಿಗೆ ಪಾಲಕರ ಪ್ರೋತ್ಸಾಹವೂ ಮುಖ್ಯ ಎಂಬ ಉದ್ದೇಶದಿಂದ ಈ ಬಾರಿ ಮೂರು ದಿನಗಳ ಕ್ರೀಡೋತ್ಸವ ಆಯೋಜಿಸಲಾಗಿದ್ದು, ಅಂತಿಮ ದಿನ ಪಾಲಕರಿಗೂ ವಿಶೇಷ ಕ್ರೀಡಾ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ ಎಂದರು.

ಅಕ್ಷರ ದಾಸೋಹದ ಸಹಾಯಕ ನಿರ್ದೇಶಕ ಮಲ್ಲಿಕಾರ್ಜುನ ಬೆಳಗಲ್ಲ ಹಾಗೂ ಸಂಸ್ಥೆಯ ಅಧ್ಯಕ್ಷ ಮಹಾಂತಗೌಡ ಬಿರಾದಾರ ಮಾತನಾಡಿದರು. ಶಾಲಾ ಮಕ್ಕಳಿಂದ ಆಕರ್ಷಕ ಪಥಸಂಚಲನ ನಡೆಸಲಾಯಿತು. ಸಂಸ್ಥೆಯ ಕಾರ್ಯದರ್ಶಿ ಸುಮಂಗಳಾ ಬಿರಾದಾರ, ಗೀತಾ ಬಿರಾದಾರ, ಪ್ರಾಂಶುಪಾಲ ಅಶೋಕ ತುಪ್ಪದ, ಆಡಳಿತಾಧಿಕಾರಿ ಪ್ರಭುಗೌಡ ಬಿರಾದಾರ, ಸತೀಶ ವಾಲಿಕಾರ ಸೇರಿದಂತೆ ಶಿಕ್ಷಕ ವೃಂದ ಹಾಗೂ ಪಾಲಕರು ಉಪಸ್ಥಿತರಿದ್ದರು. ವಿದ್ಯಾರ್ಥಿನಿ ಪಲಕ್ ಹಜೇರಿ ಸ್ವಾಗತಿಸಿದರು. ರನ್ವಿತಾ ಅನ್ನಗೌನಿ, ರಿಷಿಕಾ ಸಜ್ಜನ ಮತ್ತು ರಾಜಮಾ ಕಂದಗಲ್ಲ ನಿರೂಪಿಸಿದರು. ಅಮೋಲಿಕ ಕುಲಕರ್ಣಿ ವಂದಿಸಿದರು.

ಗುಂಡು ಎಸೆದು ಹುರಿದುಂಬಿಸಿದ ಡಿವೈಎಸ್ಪಿ

ಕಾರ್ಯಕ್ರಮದಲ್ಲಿ ಕೇವಲ ಮುಖ್ಯ ಅತಿಥಿಯಾಗಿ ವೇದಿಕೆಗೆ ಸೀಮಿತವಾಗದ ಡಿವೈಎಸ್ಪಿ ಚಂದ್ರಕಾಂತ ನಂದರೆಡ್ಡಿ, ಸ್ವತಃ ಮೈದಾನಕ್ಕಿಳಿದು ನಿಜವಾದ ಕ್ರೀಡಾಸ್ಫೂರ್ತಿ ಮೆರೆದರು.

ಕ್ರೀಡಾ ಧ್ವಜಾರೋಹಣ ನೆರವೇರಿಸಿ, 100 ಮೀಟರ್ ಓಟಕ್ಕೆ ಹಸಿರು ನಿಶಾನೆ ತೋರಿದ ಬಳಿಕ ಅವರು ಗುಂಡು ಎಸೆತ ಸ್ಪರ್ಧೆಯಲ್ಲಿ ಪಾಲ್ಗೊಂಡು ಎಲ್ಲರ ಗಮನ ಸೆಳೆದರು.

ಅಧಿಕಾರದ ಗಾಂಭೀರ್ಯವನ್ನು ಬದಿಗಿಟ್ಟು ಕಬ್ಬಿಣದ ಗುಂಡನ್ನು ಕೈಗೆತ್ತಿಕೊಂಡು ಅವರು ಎಸೆದ ಪರಿ ನೆರೆದಿದ್ದ ವಿದ್ಯಾರ್ಥಿಗಳು, ಶಿಕ್ಷಕರು ಹಾಗೂ ಪಾಲಕರಲ್ಲಿ ಮಿಂಚಿನ ಸಂಚಲನ ಮೂಡಿಸಿತು. ಡಿವೈಎಸ್ಪಿ ಅವರ ಈ ಉತ್ಸಾಹಕ್ಕೆ ಇಡೀ ಕ್ರೀಡಾಂಗಣದಲ್ಲಿ ಚಪ್ಪಾಳೆಯ ಸುರಿಮಳೆಯೇ ಸುರಿಯಿತು.

ಪ್ರಬಂಧ ಸ್ಪರ್ಧೆ: ಶಿಕ್ಷಕ ಸಂತೋಷ ಬಂಡೆ ಪ್ರಥಮ



■ ಉದಯರಶ್ಮಿ ದಿನಪತ್ರಿಕೆ

ಇಂಡಿ: ಬುಧವಾರ ನಗರದ ಗುರುಭವನದಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಜಿಲ್ಲಾ ಪಂಚಾಯತ್ ವಿಜಯಪುರ ರಾಷ್ಟ್ರೀಯ ಶಿಕ್ಷಕರ ಕಲ್ಯಾಣ ಪ್ರತಿಷ್ಠಾನ, ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ, ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿ ಬೆಂಗಳೂರು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿ ಮತ್ತು ಕ್ಷೇತ್ರ ಸಮನ್ವಯಾಧಿಕಾರಿಗಳ ಕಾರ್ಯಾಲಯದ ಸಹಯೋಗದಲ್ಲಿ ಹಮ್ಮಿಕೊಂಡ ತಾಲೂಕ ಮಟ್ಟದ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರ ಸಹಪಠ್ಯ ಚಟುವಟಿಕೆಯಲ್ಲಿ ಪ್ರಾಥಮಿಕ ವಿಭಾಗದ ಪ್ರಬಂಧ ಸ್ಪರ್ಧೆಯಲ್ಲಿ ಹಿರೇರೂಗಿ ಗ್ರಾಮದ ಯುಬಿಎಸ್ ಶಾಲೆಯ ಇಂಗ್ಲೀಷ ಶಿಕ್ಷಕ ಸಂತೋಷಕುಮಾರ ಎಸ್ ಬಂಡೆ ಅವರು ತಾಲೂಕಿಗೆ ಪ್ರಥಮ ಸ್ಥಾನ ಪಡೆದು, ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದು, ಅವರಿಗೆ ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಗಿದೆ ಎಂದು ತಾಲೂಕ ನೋಡಲ್ ಅಧಿಕಾರಿ ಆನಂದ ಹುಣಸಗಿ ತಿಳಿಸಿದ್ದಾರೆ. ಶಿಕ್ಷಣ ಸಂಯೋಜಕ ಆರ್ ಪಿ ಮಿಸಾಳೆ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಉಪಾಧ್ಯಕ್ಷ ರವಿ ಗಿಣ್ಣಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ನಮ್ಮೆಲ್ಲರನ್ನು ರಕ್ಷಿಸುವ ಬಹುದೊಡ್ಡ ಕಾನೂನು ಸಂವಿಧಾನ :ಹತ್ತಳ್ಳಿ

ರೇವತಗಾಂವ ಸರ್ಕಾರಿ ಶಾಲೆಯಲ್ಲಿ ಸಂವಿಧಾನ ದಿನ ಆಚರಣೆ । ಪ್ರತಿಜ್ಞಾ ವಿಧಿ ಬೋಧನೆ

■ ಉದಯರಶ್ಮಿ ದಿನಪತ್ರಿಕೆ



ಚಡಚಣ: ನಮ್ಮ ಸಂವಿಧಾನ ದೇಶದ ಜನರನ್ನು ಸಶಕ್ತಗೊಳಿಸಿದೆ. ಸರ್ವರಿಗೂ ಸಮಾನತೆಯೊದಗಿಸಿದೆ. ಮೂಲಭೂತ ಹಕ್ಕುಗಳು, ಕರ್ತವ್ಯವನ್ನೂ ನೀಡಿದೆ. ಭಾರತಕ್ಕೆ ಸಂವಿಧಾನವೇ ದೊಡ್ಡ ಬಲ. ನಮ್ಮ ಸಂವಿಧಾನವು ನಮ್ಮೆಲ್ಲರನ್ನು ರಕ್ಷಿಸುವ ಬಹುದೊಡ್ಡ ಕಾನೂನು ಎಂದು ಮುಖ್ಯ ಗುರು ಆರ್.ಎನ್.ಹತ್ತಳ್ಳಿಯವರು ಹೇಳಿದರು.

ಗುರುವಾರದಂದು ರೇವತಗಾಂವ ಗ್ರಾಮದ ಸರ್ಕಾರಿಹಿರಿಯಪ್ರಾಥಮಿಕಶಾಲೆಯಲ್ಲಿಹಮ್ಮಿಕೊಂಡಿದ್ದ 'ಸಂವಿಧಾನ ದಿನಾಚರಣೆ' ಅಂಗವಾಗಿ ಹಮ್ಮಿಕೊಂಡಿದ್ದ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಅವರು.

ನಮ್ಮ ದೇಶದಲ್ಲಿ ಹೊಸ ಶಕೆ ಆರಂಭವಾಗಿದ್ದು ಸಂವಿಧಾನ ಜಾರಿಗೆ ಬಂದಾಗಿನಿಂದಲೇ ಸಂವಿಧಾನದ ಮಹತ್ವದ ಬಗ್ಗೆ ಎಲ್ಲರಿಗೂ ಅರಿವು ಮೂಡಿಸುವುದು, ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರಿಗೆ ಗೌರವ ಸಲ್ಲಿಸುವುದರ ಜತೆಗೆ ಅವರ ಸಾಧನೆಯ ಬಗ್ಗೆ ತಿಳಿಸಿ ಕೊಡುವುದು ಈ ದಿನದ ವಿಶೇಷತೆ. ಭಾರತ ಸಂವಿಧಾನಕ್ಕೆ ವಿಶ್ವದಲ್ಲೇ ದೊಡ್ಡ ಸಂವಿಧಾನ ಎಂಬ ಹಿರಿಮೆ ಇದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಂವಿಧಾನದ ಪ್ರತಿಜ್ಞಾ ವಿಧಿಯನ್ನು ಎಸ್.ಡಿ.ಆದಿಗೊಂಡೆಯವರು ಶಿಕ್ಷಕ ಮತ್ತು ವಿದ್ಯಾರ್ಥಿಗಳಿಗೆ ಬೋಧಿಸಿದರು.

ಈ ವೇಳೆ ಶಿಕ್ಷಕರಾದ ಬಸವರಾಜ ಪೂಜಾರಿ. ಎಂ.ಕೆ.ಬಗಲಿ, ಪಿ.ಎ.ವಾಲಿಕಾರ, ಎ.ಎಚ್.ಬಗಲಿ, ಎನ್. ಎಸ್.ಘೋಡೇಸವಾರ, ಹೀನಾ ಸೈಯದ, ಮೌನೇಶ ಸುತಾರ, ಭಾಗ್ಯಶ್ರೀ ಪೂಜಾರಿ, ಸೀಮಾ ಪಾಟೀಲ ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಬಿಜೆಪಿ ಕಾರ್ಯಾಲಯದಲ್ಲಿ ಸಂವಿಧಾನ ದಿನಾಚರಣೆ



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಭಾರತೀಯ ಜನತಾ ಪಾರ್ಟಿಯ ವಿಜಯಪುರ ಜಿಲ್ಲಾ ಕಾರ್ಯಾಲಯದಲ್ಲಿ ನವೆಂಬರ್ 26ರಂದು ಸಂವಿಧಾನ ದಿನಾಚರಣೆಯನ್ನು ಆಚರಿಸಲಾಯಿತು. ಕಾರ್ಯಕ್ರಮದ ಅಂಗವಾಗಿ ಭಾರತದ ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ. ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಗೌರವ ನಮನಗಳನ್ನು ಅರ್ಪಿಸಲಾಯಿತು.

ಈ ಸಂದರ್ಭದಲ್ಲಿ ಬಿಜೆಪಿ ಮುಖಂಡರಾದ ಸಂಗಮೇಶ ಹೌದೆ ಮಾತನಾಡಿ, ಭಾರತದ ಸಂವಿಧಾನವು ದೇಶದ ಪ್ರಜಾಪ್ರಭುತ್ವದ ಬುನಾದಿಯಾಗಿದ್ದು, ಪ್ರತಿಯೊಬ್ಬ ನಾಗರಿಕನ ಹಕ್ಕುಗಳು, ಕರ್ತವ್ಯಗಳು ಹಾಗೂ ಜವಾಬ್ದಾರಿಗಳನ್ನು ಪ್ರತಿಪಾದಿಸುತ್ತದೆ. ಸಂವಿಧಾನದ ಆಶಯಗಳು, ಮೌಲ್ಯಗಳು ಮತ್ತು ಪ್ರಜಾಪ್ರಭುತ್ವದ ತತ್ವಗಳನ್ನು ಪ್ರತಿಯೊಬ್ಬರೂ ಅರಿತುಕೊಂಡು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.ಸಂವಿಧಾನ ರಚನೆಯಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಸೇರಿದಂತೆ ಅನೇಕ ಮಹನೀಯರು ಸಲ್ಲಿಸಿದ ಕೊಡುಗೆ ಹಾಗೂ ಪರಿಶ್ರಮವನ್ನು ಸ್ಮರಿಸಲಾಯಿತು.

ಕಾರ್ಯಕ್ರಮದಲ್ಲಿ ಬಿಜೆಪಿ ಜಿಲ್ಲಾ ಅಧ್ಯಕ್ಷರಾದ ಗುರುಲಿಂಗಪ್ಪ ಅಂಗಡಿ, ಪ್ರಮುಖರಾದ ಉಮೇಶ ಕಾರಜೋಳ, ಚಂದ್ರಶೇಖರ ಕವಟಗಿ, ಎಸ್. ಎ. ಪಾಟೀಲ, ಚಿದಾನಂದ ಚಲವಾದಿ, ರಮೇಶ ಬಿದನೂರ, ಭೀಮಾಶಂಕರ ಹದನೂರ, ಈರಣ್ಣ ರಾವೂರ, ಮಲ್ಲಮ್ಮ ಜೋಗುರ, ರವೀಂದ್ರ ಲೋಣಿ, ಹರ್ಷಗೌಡ ಪಾಟೀಲ, ಬಸವರಾಜ ಬೈಚಬಾಳ, ವಿಜಯ ಜೋಶಿ, ರಾಜೇಶ ತಾವಸೆ, ವಿನಾಯಕ ದಹಿಂಡೆ, ಮಹೇಶ ಒಡೆಯರ, ಭರತ್ ಕೋಳಿ, ಸಿದ್ಧಗೊಂಡ ಬಿರಾದಾರ, ವಿಜಯಲಕ್ಷ್ಮೀ ಪಟ್ಟಣಶೆಟ್ಟಿ, ರವಿ ಬಿರಾದಾರ, ವಿನೋದ ಕೊಳುರಗಿ ಸೇರಿದಂತೆ ಪದಾಧಿಕಾರಿಗಳು ಕಾರ್ಯಕರ್ತರು ಹಾಜರಿದ್ದರು.

ಕುಡಿವ ನೀರು ಪೂರೈಕೆಗೆ ಆಗ್ರಹಿಸಿ ಗ್ರಾಮಸ್ಥರ ಮನವಿ

■ ಉದಯರಶ್ಮಿ ದಿನಪತ್ರಿಕೆ



ಗೊಳಸಂಗಿ: ಗ್ರಾಮದಲ್ಲಿ ಕುಡಿಯುವ ನೀರು ಪೋಲಾಗುವುದನ್ನು ತಡೆಗಟ್ಟಲು ಸೂಕ್ತ ವ್ಯವಸ್ಥೆ ಕಲ್ಪಿಸುವಂತೆ ಹಾಗೂ 15 ದಿನಗಳ ಬದಲಾಗಿ 8 ದಿನಕ್ಕೊಮ್ಮೆ ನೀರು ಪೂರೈಸುವಂತೆ ಆಗ್ರಹಿಸಿ ಗ್ರಾಮಸ್ಥರು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಗ್ರಾಮದಲ್ಲಿ ನೀರು ಪೂರೈಕೆಯಾದಾಗ ಕೆಲವು ಮನೆಗಳಲ್ಲಿ ನೀರು ತುಂಬಿದ ಬಳಿಕವೂ ನಳಗಳನ್ನು ಬಂದ್ ಮಾಡದ ಕಾರಣ ನೀರು ಚರಂಡಿಗೆ ಹರಿದು ವ್ಯರ್ಥವಾಗುತ್ತಿದೆ. ಅಲ್ಲದೆ, ಕೆಲವು ಮನೆಗಳಿಗೆ ಸಮರ್ಪಕವಾಗಿ ನೀರು ತಲುಪುತ್ತಿಲ್ಲ.

15 ದಿನಗಳಿಗೊಮ್ಮೆ ನೀರು ಬಿಡುವುದರಿಂದ ಸಂಗ್ರಹಿಸಿದ ನೀರಿನಲ್ಲಿ ಹುಳಗಳು ಉತ್ಪತ್ತಿಯಾಗಿ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಆತಂಕವಿದೆ. ಆದ್ದರಿಂದ 8 ದಿನಕ್ಕೊಮ್ಮೆ ನೀರು ಪೂರೈಸಬೇಕು ಹಾಗೂ ನೀರು ಪೋಲಾಗದಂತೆ ಕ್ರಮ ಕೈಗೊಳ್ಳಬೇಕು ಎಂದು ಗ್ರಾಮಸ್ಥರು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಕರವೇ ಅಧ್ಯಕ್ಷೆ ಸಿಂಧೂರ ಚಲವಾದಿ, ಯುವ ನಾಯಕ ಇಮ್ತಿಯಾಜ್ ಹೆಬ್ಬಾಳ, ದಸ್ತಗೀರ ಸಾಹೇಬ ಸರಕೂಲಿ, ಹಣಮಂತ ಭಜಂತ್ರಿ, ಸುರೇಶ ಸಂಗಮ, ಡೋಂಗ್ರಿಸಾಬ ಹತ್ತರಕಿಹಾಳ ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.

ಬೋರಗಿಯ ಇಮಾಂಬಿಗೆ ಕನಕ ಪುರಸ್ಕಾರ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರದಿಂದ ಕೊಡಮಾಡುವ ಕನಕ ಪುರಸ್ಕಾರಕ್ಕೆ ತಾಲೂಕಿನ ಬೋರಗಿ ಗ್ರಾಮದ ತತ್ವಪದ ಹಾಡುಗಾರ್ತಿ ಇಮಾಂಬಿ ದೊಡಮನಿ ಆಯ್ಕೆಯಾಗಿದ್ದಾರೆ.

ಈ ಪುರಸ್ಕಾರವು 75 ಸಾವಿರ ನಗದು ಹಾಗೂ ಪ್ರಶಸ್ತಿ ಫಲಕ ಒಳಗೊಂಡಿದೆ. ಇಮಾಂಬಿ ದೊಡಮನಿ ಕಳೆದ ಹಲವು ವರ್ಷಗಳಿಂದ ಭಜನೆ, ತತ್ವಪದ ಹಾಡುಗಳನ್ನು ಹಾಡಿ ಜನಪ್ರಿಯತೆ ಗಳಿಸಿದ್ದಾರೆ.

ಇವರಿಗೆ ಈಗಾಗಲೇ ವಿಜಯಪುರ ಜಿಲ್ಲಾ ಆಡಳಿತ ಕೊಡಮಾಡುವ ಜಿಲ್ಲಾ ರಾಜ್ಯೋತ್ಸವ, ಕರ್ನಾಟಕ ಜಾನಪದ ಅಕಾಡೆಮಿಯ 2023ನೇ ಸಾಲಿನ ವಾರ್ಷಿಕ ಗೌರವ (25 ಸಾವಿರ ನಗದು) ಪುರಸ್ಕಾರ, ಮೈಸೂರಿನ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು ಕೊಡಮಾಡುವ ಕೆ.ಆರ್ ಲಿಂಗಪ್ಪ ಜಾನಪದ ದತ್ತಿ ಪ್ರಶಸ್ತಿ (25 ಸಾವಿರ ನಗದು) ಸೇರಿದಂತೆ ನಾಡಿನ ವಿವಿಧ ಸಂಘ ಸಂಸ್ಥೆಗಳಿಂದ ನೂರಾರು ಗೌರವ ಸನ್ಮಾನ ಹಾಗೂ ಪ್ರಶಸ್ತಿಗಳು ಲಭಿಸಿವೆ. ಡಿಸೆಂಬರ್ ತಿಂಗಳಲ್ಲಿ ಈ ಪ್ರಶಸ್ತಿ ಪ್ರದಾನ ನಡೆಯಲಿದೆ ಎಂದು ಕೇಂದ್ರದ ಅಧ್ಯಕ್ಷ ಕಾ.ತ ಚಿಕ್ಕಣ್ಣ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಕನಕ ಪುರಸ್ಕಾರ ದೊರೆತ ಹಿನ್ನಲೆಯಲ್ಲಿ ಬೋರಗಿ ವಿಶ್ವರಾಧ್ಯ ಮಠದ ತಪೋರತ್ನ ಮಹಾಲಿಂಗೇಶ್ವರ ಸ್ವಾಮಿಗಳು, ರಾಂಪೂರ ಪಿ.ಎ ಆರೂಢ ಮಠದ ವೀರೇಶ್ವರ ಸ್ವಾಮಿಗಳು, ನಿತ್ಯಾನಂದ ಮಹಾರಾಜರು, ಜಾನಪದ ವಿದ್ವಾಂಸ ಎಂ.ಎಂ ಪಡಶೆಟ್ಟಿ, ಆರಕ್ಷಕ ಮೌಲಾಲಿ ಆಲಗೂರ, ಲಾಳೇಮಷಾಕ ದೊಡಮನಿ, ಸೇರಿದಂತೆ ಸಿಂದಗಿ ಹಾಗೂ ಬೋರಗಿ ಗ್ರಾಮದ ಜನರು ಹರ್ಷವ್ಯಕ್ತಪಡಿಸಿದ್ದಾರೆ.

ಕಬ್ಬು ನುರಿಸಿದ 15 ದಿನಗಳೊಳಗೆ ರೈತರಿಗೆ ಹಣ ಪಾವತಿಸಿ

ವಿಜಯಪುರದಲ್ಲಿ ನಡೆದ ಸಕ್ಕರೆ ಕಾರ್ಖಾನೆಗಳ ಪ್ರತಿನಿಧಿಗಳ ಸಭೆಯಲ್ಲಿ ಜಿಲ್ಲಾಧಿಕಾರಿ ಡಾ. ಆನಂದ್.ಕೆ ಸೂಚನೆ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಕಬ್ಬು ನುರಿಸಿದ 15 ದಿನಗಳೊಳಗೆ ರೈತರಿಗೆ ನಿಗದಿತ ಅವಧಿಯಲ್ಲಿ ಹಣ ಪಾವತಿಸಬೇಕು. ಯಾವುದೇ ಕಾರಣಕ್ಕೂ ಪಾವತಿ ವಿಳಂಬ ಮಾಡಬಾರದು.ರೈತರ ಹಿತದೃಷ್ಟಿಯಿಂದ ಕಬ್ಬಿನ ತೂಕ ಹಾಗೂ ಪಾವತಿ ಪ್ರಕ್ರಿಯೆಯಲ್ಲಿ ಸಂಪೂರ್ಣ ಪಾರದರ್ಶಕತೆ ಕಾಯ್ದುಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಡಾ. ಆನಂದ್.ಕೆ ಅವರು ಸಕ್ಕರೆ ಕಾರ್ಖಾನೆಗಳ ಪ್ರತಿನಿಧಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ನಡೆದ ಸಕ್ಕರೆ ಕಾರ್ಖಾನೆಗಳ ಪ್ರತಿನಿಧಿಗಳ ಸಭೆಯಲ್ಲಿ ಮಾತನಾಡಿದ ಅವರು, ಕಾರ್ಖಾನೆಗಳಲ್ಲಿ ಕ